ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೩

**ಪಟ್ಟಿ – ೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೆಯ ಅಧಿವೇಶನ**
**(ಮುಂದುವರೆದ ಉಪವೇಶನ)**

**ಗುರುವಾರ, ದಿನಾಂಕ : ೧೬ನೇ ಮಾರ್ಚ್, ೨೦೧೭**

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಗೃಹ ಸಚಿವರು.

೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.

೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.

---

## ಹೈದ್ರಾಬಾದ್–ಕರ್ನಾಟಕ ಪ್ರದೇಶ ೬ ಜಿಲ್ಲೆಗಳಲ್ಲಿ “ಪೋಲೀಸ್ ಕಮಿಷನರೇಟ್” ಕಾರ್ಯಾಲಯವನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೮೧೧ (೫೧೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಐ.ಜಿ.ಪಿ. (IGP) ಕಾರ್ಯಾಲಯಗಳು ಎಷ್ಟು; (ಕಾರ್ಯಾಲಯಗಳವಾರು ವ್ಯಾಪ್ತಿ, ಸಿಬ್ಬಂದಿ ಹಾಗೂ ಪೊಲೀಸ್ ಠಾಣೆಗಳ ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಕಮಿಷನರೇಟ್ (ಆಯುಕ್ತಾಲಯ) ಕಾರ್ಯಾಲಯ ಸ್ಥಾಪಿಸುವ ಯೋಜನೆ ಸರ್ಕಾರದ ಮುಂದಿದೆಯೇ; (ಮಾಹಿತಿ ನೀಡುವುದು)

(ಇ) ಇದ್ದರೆ, ಹೆಚ್ಚಿನ ದಂಡಾಧಿಕಾರಿಯ ಅಧಿಕಾರದೊಂದಿಗೆ ಚುರುಕಾಗಿ ಆಡಳಿತವನ್ನು ನಡೆಸುವ ನಿಟ್ಟಿನಲ್ಲಿ ಬಳ್ಳಾರಿ/ಹೊಸಪೇಟೆ ಹಾಗೂ ಕಲಬುರಗಿ ಮಹಾನಗರದಲ್ಲಿ ಕಮಿಷನರೇಟ್ ಕಾರ್ಯಾಲಯವನ್ನು ಸ್ಥಾಪಿಸಲು ಸರ್ಕಾರ ಮುಂದಾಗುವುದೇ? (ಮಾಹಿತಿ ನೀಡುವುದು)

## ೩೭೧ (ಜೆ) ಅಡಿಯ ಕರ್ನಾಟಕ ಸಾರ್ವಜನಿಕ ಉದ್ಯೋಗ ಆದೇಶ ೨೦೧೩ರ ೧೨ಎ, ೧೩ಎ, ೧೩ಬಿ ಅನ್ವಯ ಕಲ್ಪಿಸಲಾದ ಸೌಲಭ್ಯಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೮೧೨ (೫೧೨) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೩೭೧ (ಜೆ) ಅಡಿಯ ಕರ್ನಾಟಕ ಸಾರ್ವಜನಿಕ ಉದ್ಯೋಗ ಆದೇಶ ೨೦೧೩ರ ೧೨ಎ, ೧೩ಎ, ಹಾಗೂ ೧೩ಬಿ ಅನ್ವಯ ಕಲ್ಪಿಸಲಾದ ಸೌಲಭ್ಯಗಳು ಯಾವುವು, (ಪ್ರತ್ಯೇಕ ಮಾಹಿತಿ ನೀಡುವುದು) ಈ ಮೇಲ್ಕಂಡ ೧೨ಎ, ೧೩ಎ, ಹಾಗೂ ೧೩ಬಿ ಅನ್ವಯ ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಆ) ೩೭೧ (ಜೆ) ಅಡಿಯ ಕರ್ನಾಟಕ ಸಾರ್ವಜನಿಕ ಉದ್ಯೋಗ ಆದೇಶ ೨೦೧೩ರ ೧೨ಎ, ೧೩ಎ, ಹಾಗೂ ೧೩ಬಿ ಅನ್ವಯ ೪ ವರ್ಷ ಗತಿಸಿದರು ಸೌಲಭ್ಯಗಳನ್ನು ಒದಗಿಸುವಲ್ಲಿ ವಿಫಲವಾಗಿ ೩೭೧ (ಜೆ) ನಿಯಮಗಳ ಸ್ಪಷ್ಟ ಉಲ್ಲಂಘನೆಯಾಗಿರುವುದಕ್ಕೆ ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಹೈದ್ರಾಬಾದ್ ಕರ್ನಾಟಕ ಪ್ರದೇಶಾ ಅಭಿವೃದ್ಧಿ ಮಂಡಳಿ ಆದೇಶ ೨೦೧೩ರ ಅಡಿಯಲ್ಲಿರುವ ೧೨ಇ ಹಾಗೂ ೫(೧) (೩) (೪) ಹಾಗೂ ೨೨(೨) (ಇ) (ಜಿ)ರ ಕಂಡಿಕೆಗಳ ಅಡಿಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪನೆ ಮಾಡಲು ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಮೂಲ ಸೌಕರ್ಯ ಹಾಗೂ ಶೈಕ್ಷಣಿಕ ಅಭಿವೃದ್ಧಿಗಾಗಿ ಅನುದಾನವನ್ನು ಒದಗಿಸುವ ಅವಕಾಶಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಕಂಡಿಕೆಗಳ ಅಡಿಯಲ್ಲಿ ಸರ್ಕಾರ/ಮಂಡಳಿ ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಮೇಲ್ಕಂಡ ಕಂಡಿಕೆಗಳಲ್ಲಿ ನೀಡಿದ ಅವಕಾಶದಂತೆ ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಶಿಕ್ಷಣಕ್ಕೆ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡಲು ಸರ್ಕಾರ/ಮಂಡಳಿ ಮುಂದಾಗುವುದೇ; ಹಾಗಿದ್ದಲ್ಲಿ, ಸರ್ಕಾರದ ಮುಂದಿರುವ ಯೋಜನೆಗಳಾವುವು? (ಮಾಹಿತಿ ನೀಡುವುದು)

## ಬೆಳಗಾವಿ, ಮೈಸೂರು ಹಾಗೂ ಬೆಂಗಳೂರು ವಿಭಾಗಗಳಲ್ಲಿ ೩೭೧ (ಜೆ) ಅಡಿಯಲ್ಲಿ ಶೇ. ೮% ಮೀಸಲಾತಿ ನೀಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೮೧೩ (೫೧೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಬೆಳಗಾವಿ, ಮೈಸೂರು ಹಾಗೂ ಬೆಂಗಳೂರು ವಿಭಾಗದಲ್ಲಿ ಸಂವಿಧಾನ ೩೭೧ (ಜೆ) ಅಡಿಯಲ್ಲಿ ಶೇ. ೮% ಮೀಸಲಾತಿ ಪ್ರಕಾರ ಆದ ನೇಮಕಾತಿಗಳು ಎಷ್ಟು ಹಾಗೂ ವಿವಿಧ ಇಲಾಖೆಗಳಲ್ಲಿ ಆದ ಬಡ್ತಿಗಳು ಎಷ್ಟು; (ಇಲಾಖಾವಾರು, ವಿಭಾಗವಾರು ಸಂಪೂರ್ಣ ವಿವರ ನೀಡುವುದು)

(ಆ) ಹೈದ್ರಾಬಾದ್ ಕರ್ನಾಟಕ ಪ್ರದೇಶ ಹೊರತುಪಡಿಸಿ ೩೭೧ (ಜೆ) ಅಡಿಯಲ್ಲಿ ರಾಜ್ಯದ ಇತರೆ ವಿಭಾಗಗಳಲ್ಲಿ ೩೭೧ (ಜೆ) ಆಶಯ ಪ್ರಕಾರ ನೇಮಕಾತಿ ಹಾಗೂ ಮುಂಬಡ್ತಿಗಳಲ್ಲಿ ಶೇ. ೮% ಮೀಸಲಾತಿ ಕಲ್ಪಿಸದೇ ಇರಲು ಕಾರಣಗಳೇನು; (ವಿವರ ನೀಡುವುದು)

(ಇ) ಹೈದ್ರಾಬಾದ್ ಕರ್ನಾಟಕ ಪ್ರದೇಶ ಹೊರತುಪಡಿಸಿ ೩೭೧ (ಜೆ) ಅಡಿಯಲ್ಲಿ ರಾಜ್ಯದ ಇತರೆ ವಿಭಾಗಗಳಲ್ಲಿ ೩೭೧ (ಜೆ) ಆಶಯ ಪ್ರಕಾರ ನೇಮಕಾತಿ ಹಾಗೂ ಮುಂಬಡ್ತಿಗಳಲ್ಲಿ ಶೇ. ೮% ಮೀಸಲಾತಿಯಲ್ಲಿ ಗೊಂದಲ ಸೃಷ್ಟಿಯಾಗಿ ನ್ಯಾಯಾಲಯದಲ್ಲಿ ವ್ಯಾಜ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಇದ್ದರೆ, ಸರ್ಕಾರ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ಹಾಗೂ ಪ್ರಸ್ತುತ ವ್ಯಾಜ್ಯ ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಈ) ಸದರಿ ೩೭೧ (ಜೆ) ಅಡಿಯಲ್ಲಿರುವಂತಹ ಶೇ. ೮% ಮೀಸಲಾತಿ ಗೊಂದಲಗಳನ್ನು ನಿವಾರಣೆ ಮಾಡಲು ಸರ್ಕಾರ ಸಂವಿಧಾನದಲ್ಲಿ ತಿದ್ದುಪಡಿ ತರಲು ಮುಂದಾಗುವುದೇ; ಇದ್ದರೆ, ವಿಧಾನಸಭೆಯಲ್ಲಿ ಹಾಗೂ ಸಂಸತ್ ಸದನದಲ್ಲಿ ತಿದ್ದುಪಡಿ ತರಲು ಕ್ರಮ ಕೈಗೊಳ್ಳುವುದೇ? (ವಿವರ ನೀಡುವದು)

## ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಪದವೀಧರರು ಹಾಗೂ ಯುವಕರಿಗೆ ಇರುವ ಯೋಜನೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೮೧೪ (೫೧೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಪದವೀಧರರಿಗೆ/ಯುವಕರಿಗೆ ಇರುವ ಯೋಜನೆಗಳು ಯಾವುವು; (ಕಳೆದ ೦೩ ವರ್ಷಗಳ ಯೋಜನಾವಾರು ಮಾಹಿತಿ ನೀಡುವುದು)

(ಆ) ಈ ನಿಟ್ಟಿನಲ್ಲಿ ಸದರಿ ಯೋಜನೆಗಳಿಗಾಗಿ ಮಂಜೂರಾದ ಮತ್ತು ಖರ್ಚಾದ ಹಣ ಎಷ್ಟು; (ಕಳೆದ ೦೩ ವರ್ಷಗಳ ಯೋಜನಾವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಸದರಿ ಯೋಜನೆ ಅಡಿಯಲ್ಲಿ ಲಾಭ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು? (ಕಳೆದ ೦೩ ವರ್ಷದ ಯೋಜನಾವಾರು ಮಾಹಿತಿ ನೀಡುವುದು)

## ಸರ್ಕಾರಿ ಅಧಿಕಾರಿ/ನೌಕರರುಗಳ ಬಡ್ತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೧೫ (೫೪೬) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಾರತದ ಸರ್ವೋಚ್ಛ ನ್ಯಾಯಾಲಯವು ಇತ್ತೀಚೆಗೆ ಮಹತ್ವದ ತೀರ್ಪು ನೀಡಿ ಸರ್ಕಾರಿ ಸೇವೆಯಲ್ಲಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ಅಧಿಕಾರಿ/ನೌಕರರ ಮುಂಬಡ್ತಿಯನ್ನು ಪರಿಷ್ಕರಿಸಲು ಸೂಚಿಸಿ ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ತೀರ್ಪಿನನ್ವಯ ಪರಿಷ್ಕೃತ ಪಟ್ಟಿಯನ್ನು ಹೊರಡಿಸಲು ಮೂರು ತಿಂಗಳು ಕಾಲಾವಕಾಶ ನೀಡಿದ್ದು, ಈಗಾಗಲೇ ಒಂದು ತಿಂಗಳು ಕಳೆದು ಹೋಗಿರುವುದರಿಂದ ಸರ್ಕಾರ ಈ ನಿಟ್ಟಿನಲ್ಲಿ ಈವರೆವಿಗೂ ಕೈಗೊಂಡಿರುವ ಕ್ರಮವೇನು;

(ಇ) ಈ ನಿಟ್ಟಿನಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಮಾರ್ಗಸೂಚಿಗಳನ್ನು ತಯಾರಿಸಿ ಎಲ್ಲ ಇಲಾಖೆಗಳಿಗೂ ಅನ್ವಯಿಸುವಂತೆ ಕ್ರಮ ಕೈಗೊಳ್ಳುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು? (ವಿವರ ನೀಡುವುದು)

## ಮಂಡ್ಯ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನಲ್ಲಿ ವಿವಿಧ ಹುದ್ದೆಗಳ ನೇಮಕಾತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೧೬ (೫೪೭) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿಯಮಿತ ಇಲ್ಲಿ ಹಾಲಿ ಇರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು (ಹುದ್ದೆವಾರು ವಿವರ ನೀಡುವುದು)

(ಆ) ಸದರಿ ಬ್ಯಾಂಕಿನ ಆದಾಯವೆಷ್ಟು; ಆದಾಯಕ್ಕನುಗುಣವಾಗಿ ಹುದ್ದೆಗಳಿಗೆ ಇರಬೇಕಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಸದರಿ ಬ್ಯಾಂಕಿನಲ್ಲಿ ದಿನಾಂಕ: ೨೬-೧೦-೨೦೧೬ರಂದು ಅಧಿಸೂಚನೆ ಹೊರಡಿಸಿ ಒಟ್ಟು ೯ ವಿವಿಧ ಹುದ್ದೆಗಳಿಗೆ ನೇಮಕಾತಿ ನಡೆಸಿರುವುದು ನಿಜವೆ; ಹಾಗಿದ್ದಲ್ಲಿ, ಹುದ್ದೆವಾರು ಮೀಸಲಾತಿ ವಿವರ ನೀಡುವುದು;

(ಈ) ಈ ಹುದ್ದೆ ನೇಮಕಾತಿಯಲ್ಲಿ ಯಾವ ಮಾನದಂಡ ಬಳಸಲಾಗಿದೆ; (ವಿವರ ನೀಡುವುದು)

(ಉ) ಸದರಿ ಬ್ಯಾಂಕ್ ಗಣಕೀಕೃತಗೊಂಡರೂ. ಮತ್ತೆ ೫೭ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಿರುವುದು ನಿಜವೇ;

(ಊ) ದಿನಾಂಕ: ೨೬-೧೦-೨೦೧೬ರ ಅಧಿಸೂಚನೆಯ ನೇಮಕಾತಿಯ ಪರೀಕ್ಷೆ ಸಂದರ್ಶನದಲ್ಲಿ ಬಾರಿ ಅಕ್ರಮ ನಡೆದ ಪರಿಣಾಮವಾಗಿ ಪ್ರಮಾಣಿಕ ಅಭ್ಯರ್ಥಿಗಳಿಗೆ ವಂಚನೆಯಾಗಿರುವುದು ಸಾರ್ವಜನಿಕವಾಗಿ ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)

## ಬೆಂಗಳೂರಿನ ನಗರದಲ್ಲಿನ ಖಾಲಿ ನಿವೇಶನಗಳ ಸ್ವಚ್ಛತಾ ಅಭಿಯಾನದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೧೭ (೫೪೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ಖಾಲಿ ನಿವೇಶನಗಳ ಸಂಖ್ಯೆ ಎಷ್ಟು; ಎಷ್ಟು ವರ್ಷಗಳಿಂದ ಖಾಲಿ ಇವೆ; (ಪಾಲಿಕೆವಾರು ವಿವರ ನೀಡುವುದು)

(ಆ) ಬೆಂಗಳೂರು ನಗರದಲ್ಲಿರುವ ಖಾಲಿ ನಿವೇಶನಗಳಲ್ಲಿ ಸಾರ್ವಜನಿಕರು ಕಸ ಹಾಕುತ್ತಿರುವುದರಿಂದ ನೈರ್ಮಲ್ಯಕ್ಕೆ ಕಾರಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು;

(ಇ) ಈ ಸಂಬಂಧವಾಗಿ ನಿವೇಶನದಾರರಿಗೆ ಯಾವ ರೀತಿಯ ಎಚ್ಚರಿಕೆ/ ನಿರ್ದೇಶನ ನೀಡಲಾಗಿದೆ; (ವಿವರ ನೀಡುವುದು)

(ಈ) ಖಾಲಿ ನಿವೇಶನದಾರರಿಗೆ ನಿವೇಶನಕ್ಕೆ ತಂತಿ ಬೇಲಿ ಹಾಕಿ ನಿವೇಶನವನ್ನು ಸ್ವಚ್ಛತೆಯಿಂದ ಇಟ್ಟುಕೊಳ್ಳುವಂತೆ ಕ್ರಮ ವಹಿಸಲಾಗುವುದೆ?

## ಮಂಡ್ಯ ನಗರದ ಮೈಸೂರು–ಬೆಂಗಳೂರು ಮುಖ್ಯ ರಸ್ತೆಯಲ್ಲಿ ಸಂಚಾರ ದಟ್ಟಣೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೧೮ (೫೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ನಗರದ ಮೈಸೂರು–ಬೆಂಗಳೂರು ಮುಖ್ಯ ರಸ್ತೆಯಲ್ಲಿ ದಿನದಿಂದ ದಿನಕ್ಕೆ ವಾಹನಗಳ ಸಂಚಾರ ದಟ್ಟಣೆ ಅಧಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸಂಚಾರ ದಟ್ಟಣೆ ಕಡಿಮೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು;

(ಇ) ವಾರದ ಕೊನೆಯ ಎರಡು ದಿನಗಳಲ್ಲಿ ಸಂಚಾರ ದಟ್ಟಣೆ ವಿಪರೀತವಾಗಿದ್ದು, ಬದಲಿ/ಪರ್ಯಾಯ ವ್ಯವಸ್ಥೆ ಮಾಡಲು ಸರ್ಕಾರ ಚಿಂತಿಸುವುದೆ; ಹಾಗಿದ್ದಲ್ಲಿ, ಇದನ್ನು ಯಾವಾಗ ಮಾಡಲಾಗುವುದು;

(ಈ) ವಾಹನ ಸುಗಮ ಸಂಚಾರಕ್ಕೆ ಅಗತ್ಯವಿರುವ ಸಂಚಾರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಮಾಹಿತಿ ನೀಡುವುದು)

## ಮಂಡ್ಯ ನಗರದ ಉದ್ಯಾನವನಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೯೯ (೫೪೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ನಗರದ ವ್ಯಾಪ್ತಿಯಲ್ಲಿರುವ ಉದ್ಯಾನವನಗಳ ಒಟ್ಟು ಸಂಖ್ಯೆ ಎಷ್ಟು;

(ಆ) ಮಂಡ್ಯ ನಗರದ ಉದ್ಯಾನವನಗಳು ಅಭಿವೃದ್ಧಿ ಹೊಂದದೆ ಸಾರ್ವಜನಿಕರ ಉಪಯೋಗಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಉದ್ಯಾನವನಗಳು ಸರಿಯಾದ ನಿರ್ವಹಣೆ ಇಲ್ಲದೆ ಜಾನುವಾರುಗಳು, ಓಡಾಡಿಕೊಂಡು ಸಾರ್ವಜನಿಕರ ಉಪಯೋಗಕ್ಕೆ ಅಡ್ಡಿ ಉಂಟು ಮಾಡುತ್ತಿರುವುದು ನಿಜವೆ;

(ಈ) ಈ ಉದ್ಯಾನವನಗಳನ್ನು ಅಭಿವೃದ್ಧಿಗೊಳಿಸಿ, ಸಾರ್ವಜನಿಕರ ಉಪಯೋಗಕ್ಕೆ ಅನುಕೂಲ ಮಾಡಿಕೊಡಲು ಸರ್ಕಾರ ಎಷ್ಟು ಅವಧಿಯೊಳಗೆ ಕ್ರಮ ಕೈಗೊಳ್ಳುವುದು? (ವಿವರ ನೀಡುವುದು)

## ಪೊಲೀಸ್ ಇಲಾಖೆಯ ಸ್ಥಾಯಿ ಆದೇಶ ೭೦೪ರ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೮೨೦ (೫೫೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪೊಲೀಸ್ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ ಕರ್ತವ್ಯ ನಿರ್ವಹಿಸಿ ೩ ರಿಂದ ೫ ವರ್ಷಗಳ ಸೇವಾವಧಿ ಪೂರ್ಣಗೊಳ್ಳುವ ಮೊದಲೇ ಪ್ರಥಮ ದರ್ಜೆ ಸಹಾಯಕರಾಗಿ ಬಡ್ತಿ ಹೊಂದಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪ್ರಸ್ತುತ ಸದರಿ ಸಿಬ್ಬಂದಿಗಳು ಯಾವ ಹುದ್ದೆಯಲ್ಲಿ ಯಾವ ಘಟಕ/ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ; (ಹೆಸರು, ಹುದ್ದೆಯೊಂದಿಗೆ ವಿವರ ನೀಡುವುದು)

(ಆ) ಪೊಲೀಸ್ ಇಲಾಖೆಯ ಸ್ಥಾಯಿ ಆದೇಶ ಸಂಖ್ಯೆ ೭೦೪ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ವಿರುದ್ಧವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸ್ಥಾಯಿ ಆದೇಶವನ್ನು ರದ್ದುಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಸ್ಥಾಯಿ ಆದೇಶದಂತೆ ಪೊಲೀಸ್ ಕೇಂದ್ರ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದ್ವಿತೀಯ ದರ್ಜೆ ಸಹಾಯಕ ಸಿಬ್ಬಂದಿಗಳಿಗೆ ಮಾತ್ರವೆ ೩ ರಿಂದ ೫ ವರ್ಷಗಳ ಸೇವಾವಧಿ ಪೂರ್ಣಗೊಳ್ಳುವ ಮೊದಲೇ ಬಡ್ತಿ ದೊರೆಯುತ್ತಿದ್ದು, ಇದರಿಂದ ರಾಜ್ಯದ ಇತರ ಜಿಲ್ಲೆಗಳಲ್ಲಿ ಮತ್ತು ಬೇರೆ ಘಟಕಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಅನ್ಯಾಯವಾಗುತ್ತಿರುವುದು ಮತ್ತು ೩೭೧ಜೆ ಅನ್ವಯ ದೊರೆಯಬೇಕಾದ ಸೌಲಭ್ಯಗಳು ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಸ್ಥಾಯಿ ಆದೇಶವನ್ನು ರದ್ದುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು?

## ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಆರ್ಥಿಕ ಇಲಾಖೆಯ ರೀತಿ ನೀತಿಯ ಕುರಿತು.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೮೨೧ (೫೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳು, ಪದವಿ ಪೂರ್ವ ಕಾಲೇಜುಗಳು, ಪದವಿ ಕಾಲೇಜುಗಳು, ಐ.ಟಿ.ಐ. ಕಾಲೇಜುಗಳು, ಪಾಲಿಟೆಕ್ನಿಕ್ ಕಾಲೇಜುಗಳು, ಕಾನೂನು ಕಾಲೇಜುಗಳು, ಬಿ.ಎಡ್ ಹಾಗೂ ಡಿ.ಎಡ್ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಹೊಸ ನೀತಿ ತರುವ ಯೋಚನೆ ಹಾಗೂ ಚಿಂತನೆಯನ್ನು ಸರ್ಕಾರ ನಡೆಸುತ್ತಿದೆಯೇ ;

(ಆ) ಈ ಕುರಿತು ಸಂಪುಟ ಉಪ ಸಮಿತಿ ರಚಿಸಲಾಗಿದೆಯೇ ; ರಚಿಸಲಾಗಿದ್ದಲ್ಲಿ, ಯಾವಾಗ ಈ ಸಂಪುಟ ಉಪ ಸಮಿತಿ ರಚನೆಯ ಉದ್ದೇಶವೇನು ;

(ಇ) ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರದ ಚಿಂತನೆ ಹಾಗೂ ಕ್ರಮವೇನು ?

## ಎಫ್.ಎಸ್. ಎಲ್. ನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೮೨೨ (ಶಶಳ) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ (SFL) ಕರ್ತವ್ಯ ನಿರ್ವಹಿಸುತ್ತಿರುವ ವೈಜ್ಞಾನಿಕ ಅಧಿಕಾರಿ ಮತ್ತು ಸಹಾಯಕರುಗಳ ಸಂಖ್ಯೆ ಎಷ್ಟು ; ಲಿಪಿಕ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಪ್ರಾದೇಶಿಕ ನ್ಯಾಂುು ವಿಜ್ಞಾನ ಪ್ರಯೋಗಾಲಯಗಳಿವೆ ; (RFSL) ಮಂಗಳೂರಿನ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಲಿಪಿಕ ಸಿಬ್ಬಂದಿಗಳೂ ಒಳಗೊಂಡಂತೆ ಹುದ್ದೆವಾರು ವಿವರ ನೀಡುವುದು ; ಬೆಂಗಳೂರಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ/ಅಧಿಕಾರಿಗಳ ಸಂಖ್ಯೆ ಎಷ್ಟು ;

(ಇ) ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಸಿಬ್ಬಂದಿಗಳು ಅನ್ಯ ಕರ್ತವ್ಯದ ಮೇಲೆ ಬೆಂಗಳೂರಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಪ್ರಾದೇಶಿಕ ನ್ಯಾಯ ವಿಜ್ಞಾನ ಕೇಂದ್ರಗಳಲ್ಲಿ ಸಿಬ್ಬಂದಿಗಳ ಕೊರತೆಯುಂಟಾಗಿ ಸ್ಥಳೀಯ ಪೊಲೀಸರ ದೈನಂದಿನ ಕೆಲಸ ಕಾರ್ಯಗಳಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಬಂದಿದ್ದಲ್ಲಿ, ಈ ರೀತಿಯಾಗಿ ಅನ್ಯ ಕರ್ತವ್ಯದ ಮೇಲೆ ನೆಲೆಯಲ್ಲಿ ಬೆಂಗಳೂರಿನ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಕರ್ತವ್ಯ ನಿರ್ವಹಿಸುವಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಬೆಂಗಳೂರಿನ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿರುವ ವೈಜ್ಞಾನಿಕ ಅಧಿಕಾರಿ ಮತ್ತು ವೈಜ್ಞಾನಿಕ ಸಹಾಯಕರುಗಳ ಹಾಗೂ ಸಿಬ್ಬಂದಿಗಳನ್ನು ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಕರ್ತವ್ಯಕ್ಕೆ ನಿಯೋಜಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಇದನ್ನು ಯಾವಾಗ ಕಾರ್ಯಗತಗೊಳಿಸಲಾಗುವುದು;

(ಉ) ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯಗಳನ್ನು ಪೂರ್ಣ ಪ್ರಮಾಣದ ನ್ಯಾಯ ವಿಜ್ಞಾನ ಪ್ರಯೋಗಾಲಯವಾಗಿ ಉನ್ನತೀಕರಿಸಲು ಹಾಗೂ ಪ್ರತಿಯೊಂದು ಜಿಲ್ಲೆಯಲ್ಲಿ ನ್ಯಾಯ ವಿಜ್ಞಾನ ಪ್ರಯೋಗಾಲಯ ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ನಗರ ಭೂ ಸಾರಿಗೆ ಸೆಸ್ ವಸೂಲಾತಿ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೩ (೫೦೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಗರ ಭೂ ಸಾರಿಗೆ ಸೆಸ್‌ನ್ನು ವಸೂಲಿ ಮಾಡಲಾಗುತ್ತಿದೆಯೇ ; ಯಾವ ದರದಲ್ಲಿ ಸೆಸ್‌ನ್ನು ವಸೂಲಿ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಆ) ಇದುವರೆವಿಗೂ ವಸೂಲಿಯಾದ ನಗರ ಭೂ ಸಾರಿಗೆ ಸೆಸ್ ಎಷ್ಟು ; (ನಗರ ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಇ) ವಸೂಲಿಯಾದ ಸೆಸ್‌ನ್ನು ಬಳಸಲು ಸರ್ಕಾರವು ಅಳವಡಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ಒಟ್ಟು ವಸೂಲಿಯಾದ ಹಾಗೂ ಖರ್ಚು ಮಾಡಲಾಗಿರುವ ಸೆಸ್ ಎಷ್ಟು ? (ವಿವರ ನೀಡುವುದು)

## ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪತ್ರಿಕಾ ವರದಿಗಾರರ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೮೨೪ (೫೨೫) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಜಿಲ್ಲಾ ಮಟ್ಟದ ಮತ್ತು ತಾಲ್ಲೂಕು ಮಟ್ಟದ ಪತ್ರಿಕಾ ವರದಿಗಾರರಿಗೆ ಸ್ಥಳೀಯ ಪ್ರದೇಶದಲ್ಲಿ ಪ್ರಯಾಣಿಸಲು ಉಚಿತ ಬಸ್ ಪಾಸ್ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿರುವ ವಿವಿಧ ಸಹಕಾರ ಸಂಘಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೮೨೫ (೫೨೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ವಿವಿಧ ಸಹಕಾರ ಸಂಘಗಳಲ್ಲಿ ಈಗಿರುವ ಸದಸ್ಯರುಗಳ ಸಂಖ್ಯೆ ಎಷ್ಟು ;

(ಆ) ರಾಯಚೂರು ಜಿಲ್ಲೆಯಲ್ಲಿರುವ ಸಹಕಾರ ಸಂಘಗಳ ಸದಸ್ಯರುಗಳಿಗೆ ಸರ್ಕಾರದ ವಿವಿಧ ಯೋಜನೆಗಳಿಂದ ಎಷ್ಟು ಸೌಲಭ್ಯ ಮಂಜೂರಾಗಿದೆ (Benefits) ; (ವಿವರ ನೀಡುವುದು)

(ಇ) ರಾಯಚೂರು ಜಿಲ್ಲೆಯಲ್ಲಿರುವ ವಿವಿಧ ನರ್ಸಿಂಗ್ ಹೋಂಗಳಲ್ಲಿ (ಆಸ್ಪತ್ರೆಗಳಿಗೆ) ಯಶಸ್ವಿನಿ ಯೋಜನೆ ಅಳವಡಿಸಲು ಅನುಮತಿ ದೊರೆತಿದೆಯೇ ; ಹಾಗಿದ್ದಲ್ಲಿ, ಎಷ್ಟು ಆಸ್ಪತ್ರೆಗಳಿಗೆ ಯಶಸ್ವಿನಿ ಯೋಜನೆಗೆ ಅಳವಡಿಸಲು ಅನುಮತಿ ದೊರೆತಿದೆ ;

(ಈ) ರಾಯಚೂರು ಜಿಲ್ಲೆಯ ವಿವಿಧ ಸಹಕಾರ ಸಂಘಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನಾಂಗಕ್ಕೆ ಸದಸ್ಯತ್ವ ನೋಂದಣಿಗೆ ಸರ್ಕಾರ ನೀಡಿರುವ ಸಹಾಯಧನ ಎಷ್ಟು ;

(ಉ) ಜಿಲ್ಲೆಯ ಎಷ್ಟು ಸದಸ್ಯರುಗಳಿಗೆ ಷೇರು ಹಣ (Share amount) ವನ್ನು ಸರ್ಕಾರ ಪಾವತಿಸಿದೆಯೇ ? (ವಿವರ ನೀಡುವುದು)

## ೩೭೧ (ಜೆ) ಕಲಂ ಪ್ರಕಾರ ಪೊಲೀಸ್ ಕಾನ್ಸ್‌ಸ್ಟೇಬಲ್‌ಗಳಿಗೆ ಬಡ್ತಿ ನೀಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೮೨೬ (೫೨೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್ ಪ್ರದೇಶದ ೩೭೧(ಜೆ) ಕಲಂ ಪ್ರಕಾರ ೨೦೧೬–೧೭ ರಲ್ಲಿ ಪೊಲೀಸ್ ಕಾನ್ಸ್‌ಸ್ಟೇಬಲ್‌ಗಳಿಗೆ ಬಡ್ತಿ ನೀಡುವ ಸಂದರ್ಭದಲ್ಲಿ ಆಗಿರುವ ವ್ಯತ್ಯಾಸಗಳ ಬಗ್ಗೆ ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿರುವ ಪ್ರಸ್ತುತ ಜಿಲ್ಲಾ ಕೇಂದ್ರ ಕಾರಾಗೃಹವನ್ನು ನಗರದ ಹೊರ ಭಾಗಕ್ಕೆ ಸ್ಥಳಾಂತರಿಸಲು ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಮಾನ್ವಿ ತಾಲ್ಲೂಕಿನ ಸಿರವಾರ (Sirwara) ಪಟ್ಟಣದಲ್ಲಿ ನೂತನ ಅಗ್ನಿಶಾಮಕ ಠಾಣೆ ಪ್ರಾರಂಭಿಸಲು ಸರಕಾರ ತೆಗೆದುಕೊಂಡ ಕ್ರಮಗಳೇನು ?

## ಮಹಾಲೇಖಪಾಲರ ವರದಿಯಲ್ಲಿ ಆಗಿರುವ ಆರ್ಥಿಕ ನಷ್ಟಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮದ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೮೨೭ (೫೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಾಲೇಖಪಾಲರು ರಾಜ್ಯದ ಲೆಕ್ಕಪತ್ರಗಳನ್ನು ಪರಿಶೀಲಿಸಿ ವಿಧಾನಮಂಡಲಗಳಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳಲು ವರದಿ ಸಲ್ಲಿಸುವುದು ಯಾವಾಗಿನಿಂದ ಪ್ರಾರಂಭವಾಗಿದೆ ;

(ಆ) ಇಲ್ಲಿಯವರೆಗೆ ಮಹಾಲೇಖಪಾಲರು ನೀಡಿದ ವರದಿಗಳನ್ವಯ ಪ್ರತಿ ವರ್ಷ ಅಧಿಕಾರಿಗಳು ಹಾಗೂ ಇಲಾಖೆಗಳು ದುರುಪಯೋಗಪಡಿಸಿಕೊಂಡಿರುವ ಮೊತ್ತ ಎಷ್ಟು ;

(ಇ) ಆರ್ಥಿಕ ಹಾನಿಗೆ ಕಾರಣರಾದ ಅಧಿಕಾರಿಗಳು ಹಾಗೂ ಇಲಾಖೆಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಹಣ ದುರುಪಯೋಗ ಸಾಬೀತಾದ ಪ್ರಕರಣಗಳಲ್ಲಿ ತಪ್ಪಿತಸ್ಥ ಅಧಿಕಾರಿಗಳಿಂದ ಸರ್ಕಾರ ಮರುಪಾವತಿಸಿಕೊಂಡ ಹಣ ಎಷ್ಟು;

(ಉ) ಇನ್ನೂ ಬರಬೇಕಾದ ಬಾಕಿ ಹಣ ಎಷ್ಟು ;

(ಊ) ತಪ್ಪಿತಸ್ಥ ಅಧಿಕಾರಿಗಳನ್ನು ಶಿಕ್ಷಿಸಲು ಸರ್ಕಾರ ಕೈಗೊಂಡ ಕಾನೂನಾತ್ಮಕ ಕ್ರಮಗಳೇನು ?

## ಸರ್ಕಾರಿ ನೌಕರರ ವೇತನ ಪರಿಷ್ಕರಣೆ ಕುರಿತು ರಚಿಸಲಾದ ವೇತನ ಆಯೋಗಗಳ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೮೨೮ (೫೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನೌಕರರಿಗೆ ಸಂಬಳ ಭತ್ಯೆ ನಿಗದಿಪಡಿಸಲು ಇಲ್ಲಿಯವರೆಗೆ ಎಷ್ಟು ವೇತನ ಆಯೋಗ ಹಾಗೂ ಅಧಿಕಾರಿ ವೇತನ ಸಮಿತಿಗಳನ್ನು ರಚಿಸಲಾಗಿದೆ ;

(ಆ) ಈ ಆಯೋಗ ಹಾಗೂ ಅಧಿಕಾರಿ ವೇತನ ಸಮಿತಿಗಳು ಕಾಲ ಕಾಲಕ್ಕೆ ನೀಡಿದ ವರದಿಗಳನ್ನು ಜಾರಿಗೊಳಿಸಿದ ನಂತರವೂ ನೌಕರರು ವೇತನ ಆಯೋಗ ರಚಿಸಲು ರಾಜ್ಯದ ನೌಕರರು ಒತ್ತಾಯ ನಡೆಸಿದ್ದು, ಈ ಕುರಿತು ಸರ್ಕಾರ ಯಾವ ನಿರ್ಧಾರ ಕೈಗೊಂಡಿದೆ;

(ಇ) ನೂತನ ವೇತನ ಆಯೋಗವನ್ನು ರಚಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಈ) ಉದ್ದೇಶಿಸಿದ್ದಲ್ಲಿ, ವೇತನ ಆಯೋಗವನ್ನು ಯಾವಾಗ ರಚಿಸಿ ಆದೇಶ ಹೊರಡಿಸಲಾಗುವುದು ?

## ರಾಜ್ಯದಲ್ಲಿ ಭ್ರಷ್ಟಾಚಾರ ನಿಗ್ರಹದಳದ ಕಾರ್ಯಾಚರಣೆಗಳ ಫಲಶ್ರುತಿಯ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೮೨೯ (೫೮೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭ್ರಷ್ಟಾಚಾರ ನಿಗ್ರಹದಳವನ್ನು (ಎ.ಸಿ.ಬಿ) ಪ್ರಾರಂಭಿಸಲಾಗಿದ್ದು ಯಾವಾಗ ;

(ಆ) ಎ.ಸಿ.ಬಿ. ಯಲ್ಲಿ ಯಾವ ಯಾವ ದರ್ಜೆಯ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ;

(ಇ) ಇಲ್ಲಿಯವರೆಗೆ ಭ್ರಷ್ಟಾಚಾರ ನಿಗ್ರಹದಳವು ನಡೆಸಿದ ದಾಳಿಗಳೆಷ್ಟು;

(ಈ) ಈ ದಾಳಿಗಳಲ್ಲಿ ಪತ್ತೆ ಹಚ್ಚಲಾದ ಅಕ್ರಮ ಸಂಪಾದನೆ ಆಸ್ತಿ ಹಣ ಎಷ್ಟು ; ವಶಪಡಿಸಿಕೊಂಡ ಆಸ್ತಿಯ ಮೌಲ್ಯ ಹಾಗೂ ಹಣ ಎಷ್ಟು ;

(ಉ) ತಪ್ಪಿತಸ್ಥರ ವಿರುದ್ಧ ಇಲ್ಲಿಯವರೆಗೆ ಎಷ್ಟು ಜನರ ವಿರುದ್ಧ ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ ; ಈ ಪ್ರಕರಣಗಳು ಯಾವ ಹಂತದಲ್ಲಿವೆ ?

## ಹುಬ್ಬಳ್ಳಿಯ ಜಗದೀಶ ನಗರದ ಆಶ್ರಯ ಬಡಾವಣೆಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೮೩೦ (೫೭೯) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿಯ ಜಗದೀಶ ನಗರದ ಆಶ್ರಯ ಮನೆಗಳಿಗೆ ಶೌಚಾಲಯ, ವಿದ್ಯುತ್ ಸಂಪರ್ಕ ಇನ್ನಿತರ ಮೂಲಭೂತ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆಶ್ರಯ ನಿವಾಸಿಗಳಿಗೆ ಸಾಲ ಮನ್ನಾ ಮಾಡಿರುವ ತಿಳುವಳಿಕೆ ಪ್ರಮಾಣ ಪತ್ರವನ್ನು ಈವರೆಗೆ ನೀಡದಿರುವುದು ನಿಜವೇ ; ಮತ್ತು ಮೂಲ ಆಶ್ರಯ ಫಲಾನುಭವಿಗಳಿಗೆ ನೀಡಿದ ಆಶ್ರಯ ಮನೆಗಳ ನೋಂದಣಿ ಮಾಡಿಸಿಕೊಡಲಾಗಿದೆಯೇ ;

(ಇ) ಜಗದೀಶ ನಗರದಲ್ಲಿ ಸಮುದಾಯ ಭವನ ಹಾಗೂ ಅಂಗನವಾಡಿ ಕೇಂದ್ರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈಗ ನಿರ್ಮಿಸುತ್ತಿರುವ ೧೮೮ ಆಶ್ರಯ ಮನೆಗಳು ಕಳಪೆ ಮಟ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಜಗದೀಶ ನಗರದ ಆಶ್ರಯ ನಿವಾಸಿಗಳ ಎಲ್ಲಾ ಸಮಸ್ಯೆಗಳನ್ನು ಸರ್ಕಾರ ಯಾವಾಗ ಪರಿಹರಿಸಲಿದೆ ?

## ಅಸಾಮಿ ಸಾಲ ಪದ್ಧತಿ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೮೩೧ (೫೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಉತ್ತರ ಕನ್ನಡ ಜಿಲ್ಲೆಯಲ್ಲಿ ಅಲ್ಪಾವಧಿ ಸಾಲ ಹಾಗೂ ಕೃಷಿ ಸಾಲ ವಾಡಿಕೆಯಲ್ಲಿ ಅಸಾಮಿ ಸಾಲ ಎನ್ನುವ ಪದ್ಧತಿ ಯಾವ ವರ್ಷದಿಂದ ಚಾಲ್ತಿಯಲ್ಲಿದೆ ;

(ಆ) ಈ ಸಾಲವನ್ನು ರೈತರು ಯಾವ ಉದ್ದೇಶಕ್ಕಾಗಿ ಪಡೆಯುತ್ತಿದ್ದಾರೆ ಹಾಗೂ ಇದರ ಮೂಲ ಉದ್ದೇಶವೇನು ;

(ಇ) ಸರ್ಕಾರ ಇದನ್ನು ಕೃಷಿ ಸಾಲದ ವ್ಯಾಪ್ತಿಗೆ ಸೇರಿಸದಿರಲು ಕಾರಣಗಳೇನು ; ರಾಜ್ಯ ಸರ್ಕಾರ ಈ ಸಾಲವನ್ನು ಕೃಷಿ ಸಾಲಕ್ಕೆ ಸೇರಿಸದೆ ಇರುವುದರಿಂದ ಕಾರವಾರ ಜಿಲ್ಲೆಯ ರೈತರು ಸರ್ಕಾರದಿಂದ ಯಾವ ಸವಲತ್ತನ್ನು ಪಡೆಯಲು ಸಾಧ್ಯವಾಗದೆ ಇರುವುದು ನಿಜವೇ ;

(ಈ) ನಿಜವಿದ್ದಲ್ಲಿ, ಅಲ್ಲಿಯ ರೈತರಿಗೆ ಈ ಅಸಾಮಿ ಸಾಲ ಪಡೆದವರಿಗೆ ಉಳಿದ ಸಾಲದಂತೆ ಎಲ್ಲಾ ರಿಯಾಯಿತಿ ಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಆಧಾರ್ ಕಾರ್ಡ್ ಪಡೆದ ಬಿ.ಪಿ.ಎಲ್ ಕುಟುಂಬಗಳಿಗೆ ಪ್ರೋತ್ಸಾಹ ಧನ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೮೩೨ (೫೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಜನತೆಗೆ ಆಧಾರ್ ಕಾರ್ಡ್ ವಿತರಿಸುವ ಯೋಜನೆಯನ್ನು ಯಾವಾಗಿನಿಂದ, ಯಾವ ಯಾವ ಜಿಲ್ಲೆಗಳಲ್ಲಿ ಜಾರಿಗೊಳಿಸಲಾಯಿತು ;

(ಆ) ಇಲ್ಲಿಯವರೆಗೆ ಎಷ್ಟು ಜನಗಳಿಗೆ ಆಧಾರ್ ಕಾರ್ಡ್ ವಿತರಿಸಲಾಗಿದೆ ; ಬಾಕಿ ಉಳಿದಿರುವ ಜನರ ಸಂಖ್ಯೆ ಎಷ್ಟು ;

(ಇ) ಇದರ ಸಂಬಂಧ ಇಲ್ಲಿಯವರೆಗೆ ಒಟ್ಟಾರೆ ಖರ್ಚಾಗಿರುವ ಹಣವೆಷ್ಟು ; ಇದರಲ್ಲಿ ಕೇಂದ್ರ ಸರ್ಕಾರದ ಪಾಲು ಎಷ್ಟು ; ಹಾಗೂ ರಾಜ್ಯ ಸರ್ಕಾರದ ಪಾಲು ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಬಿ.ಪಿ.ಎಲ್ ಕುಟುಂಬದ ಒಬ್ಬ ಸದಸ್ಯನು ಆಧಾರ್ ಕಾರ್ಡ್ ಪಡೆದುಕೊಂಡರೆ ಅವರಿಗೆ ಪ್ರೋತ್ಸಾಹ / ಸಹಾಯ ಧನವಾಗಿ ನೀಡುವ ಹಣ ಎಷ್ಟು ;

(ಉ) ಈ ಹಣವನ್ನು ಈಗಾಗಲೇ ಆಧಾರ್ ಕಾರ್ಡ್ ಪಡೆದಿರುವ ಬಿ.ಪಿ.ಎಲ್ ಕುಟುಂಬ ಸದಸ್ಯರಿಗೆ / ಜನರಿಗೆ ನೀಡಲಾಗಿದೆಯೇ ; (ವಿವರ ನೀಡುವುದು)

(ಊ) ನೀಡದೇ ಇದ್ದರೆ, ಇದಕ್ಕೆ ಕಾರಣಗಳೇನು ; ಸದರಿ ಹಣವನ್ನು ಸರ್ಕಾರ ಏನು ಮಾಡಿರುತ್ತದೆ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಲೋಕಾಯುಕ್ತಕ್ಕೆ ವಹಿಸಲಾದ ಪ್ರಕರಣಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೮೩೩ (೫೭೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿನಾಂಕ: ೧೦–೦೧–೨೦೦೫ ರಿಂದ ಇಲ್ಲಿಯವರೆಗೆ ಎಷ್ಟು ನೇಮಕಾತಿ ವೈಪರೀತ್ಯ, ಅಕ್ರಮಗಳ ಪ್ರಕರಣಗಳನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ ೧೯೮೪ ಕಲಂ ೭(೨ಎ) ಅಡಿಯಲ್ಲಿ ಸರ್ಕಾರವು ಲೋಕಾಯುಕ್ತ ಸಂಸ್ಥೆಗೆ ವಹಿಸಲಾಗಿದೆ ; (ಇಲಾಖಾವಾರು, ವರ್ಷಾವಾರು ಮಾಹಿತಿ ನೀಡುವುದು)

(ಆ) ಈ ರೀತಿ ವಹಿಸಿದ ಪ್ರಕರಣಗಳಲ್ಲಿ ಲೋಕಾಯುಕ್ತ ಸಂಸ್ಥೆಯು ಎಷ್ಟು ಪ್ರಕರಣಗಳಿಗೆ ಪರಿಶೀಲನೆ ಮಾಡಿ ವರದಿ ನೀಡಿರುತ್ತದೆ ; ಎಷ್ಟು ಪ್ರಕರಣಗಳನ್ನು ವ್ಯಾಪ್ತಿಗೆ ಬರುವುದಿಲ್ಲವೆಂದು ಸರ್ಕಾರಕ್ಕೆ ಹಿಂತಿರುಗಿಸಿರುತ್ತದೆ ;

(ಇ) ಲೋಕಾಯುಕ್ತ ಕಂಪ್ಲೇಂಟ್ ನಂ BCD ೪೨೪/೨೦೦೮ರ ಪ್ರಕರಣವನ್ನು ಮಾನ್ಯ ಲೋಕಾಯುಕ್ತರು ೫ ವರ್ಷಗಳ ಬಳಿಕ ನಮ್ಮ ವ್ಯಾಪ್ತಿಗೆ ಬರುವುದಿಲ್ಲವೆಂದು ಸರ್ಕಾರಕ್ಕೆ ಹಿಂತಿರುಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ಲೋಕಾಯುಕ್ತ ಕಂಪ್ಲೇಂಟ್ ನಂ BCD ೪೨೪/೨೦೦೮ರ ಪ್ರಕರಣವನ್ನು ಮಾನ್ಯಲೋಕಾಯುಕ್ತರು ದಿನಾಂಕ:೧೦–೦೬–೨೦೦೯ ರಂದು ದಿನಪತ್ರಿಕೆಯಲ್ಲಿ ಸಾರ್ವಜನಿಕ ತಿಳುವಳಿಕೆ ಪತ್ರ ನೀಡಿ ನಂತರ ನಮ್ಮ ವ್ಯಾಪ್ತಿಗೆ ಬರುವುದಿಲ್ಲ ಎಂದು ಹೇಳಿರುವುದು ಸಮಂಜಸವೇ ;

(ಉ) ಇದರಿಂದ ೧೫ ಜನ ಗ್ರಾಮೀಣ ಪದವೀಧರ ಅಭ್ಯರ್ಥಿಗಳಿಗೆ ಸರ್ಕಾರಿ ಕೆಲಸ ಕೈತಪ್ಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದರೆ, ಇವರಿಗೆ ಯಾವ ರೀತಿ ನ್ಯಾಯ ಒದಗಿಸಲಾಗುವುದು ?

## ಪೌರ ಕಾರ್ಮಿಕರ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೮೩೪ (೫೭೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ ಪೌರ ಕಾರ್ಮಿಕರ ಹುದ್ದೆಗಳೆಷ್ಟು ; ದಿನಾಂಕ: ೦೧–೦೭–೨೦೧೪ರಂದು ಎಷ್ಟು ಹುದ್ದೆಗಳನ್ನು ತುಂಬಲು ಅರ್ಜಿ ಕರೆಯಲಾಗಿತ್ತು ;

(ಆ) ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ಇವುಗಳಿಂದ ಬಂದ ಅರ್ಜಿ ಶುಲ್ಕವೆಷ್ಟು ; ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಹಾಗೂ ಇತರೆ ವರ್ಗದ ವಿವರವಾದ ಮಾಹಿತಿ ನೀಡುವುದು ;

(ಇ) ಹಾಲಿ ಕೆಲಸ ನಿರ್ವಹಿಸುತ್ತಿರುವ ಪೌರ ಕಾರ್ಮಿಕರನ್ನು ಖಾಯಂ ಮಾಡುವಂತೆ ಮಾನ್ಯ ಉಚ್ಚ ನ್ಯಾಯಾಲಯದಿಂದ ಆದೇಶ ಬಂದಿರುವುದು ನಿಜವೇ ; ಹಾಗಿದ್ದರೆ, ನ್ಯಾಯಾಲಯದ ಪ್ರತಿ ಒದಗಿಸುವುದು ;

(ಈ) ಸದರಿ ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿದ್ದರೆ, ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಅವರು ತುಂಬಿದ ಅರ್ಜಿ ಶುಲ್ಕವನ್ನು ಯಾವ ರೀತಿ ಮತ್ತು ಯಾವಾಗ ಹಿಂತಿರುಗಿಸಲಾಗುವುದು ? (ವಿವರವಾದ ಮಾಹಿತಿ ನೀಡುವುದು)

## ಸಚಿವಾಲಯದಲ್ಲಿರುವ ಇಲಾಖೆಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೮೩೫ (೫೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಇರುವ ಇಲಾಖೆಗಳ ಸಂಖ್ಯೆ ಎಷ್ಟು; ಅವು ಯಾವುವು ; ಮತ್ತು ಕ್ಷೇತ್ರದಲ್ಲಿರುವ ಇಲಾಖೆಗಳ ಸಂಖ್ಯೆ ಎಷ್ಟು; ಅವು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಸಚಿವಾಲಯದ ಇಲಾಖೆಗಳು ಮತ್ತು ಕ್ಷೇತ್ರ ಇಲಾಖೆಗಳ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು / ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು, ಎಷ್ಟಿವೆ ; (ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಇ) ಹಾಲಿ ಸದರಿ ಸಂಸ್ಥೆಗಳ ಮುಖ್ಯಸ್ಥರು ಯಾರು ; ಹೆಸರು ಹಾಗೂ ದೂರವಾಣಿ ಸಂಖ್ಯೆಯೊಂದಿಗೆ ವಿವರ ನೀಡುವುದು ?

## ಖಾಲಿ ಹುದ್ದೆಗಳನ್ನು ಶೀಘ್ರವಾಗಿ ಭರ್ತಿ ಮಾಡುವ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೩೬ (೫೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಕಛೇರಿಗಳಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕ ಕೆಲಸ ಕಾರ್ಯಗಳಿಗೆ ತೊಂದರೆಯಾಗುತ್ತಿಲ್ಲವೆ ;

(ಆ) ಸಚಿವಾಲಯವೂ ಸೇರಿದಂತೆ ರಾಜ್ಯ ಸರ್ಕಾರದ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; ಇದನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಇ) ನಿರುದ್ಯೋಗ ಸಮಸ್ಯೆ ನಿವಾರಣೆ ಮಾಡುವ ಸಾಮಾಜಿಕ ಹೊಣೆ ಸರ್ಕಾರಕ್ಕಿಲ್ಲವೇ ; ಇದ್ದರೆ, ಈ ವಿಚಾರದಲ್ಲಿ ಸರ್ಕಾರದ ನಿಲುವೇನು ?

## ರೇಸ್‌ಕೋರ್ಸ್ ಸ್ಥಳಾಂತರಿಸಿ ಅಮ್ಯೂಸ್ಮೆಂಟ್ ಪಾರ್ಕ್ ನಿರ್ಮಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೩೭ (೫೩೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೇಸ್‌ಕೋರ್ಸ್‌ನ್ನು ಬೆಂಗಳೂರಿನ ಹೊರವಲಯಕ್ಕೆ ಸ್ಥಳಾಂತರಿಸಲು ಈ ಹಿಂದೆ ಸರ್ಕಾರ ತೀರ್ಮಾನಿಸಿದ್ದು ನಿಜವೇ ;

(ಆ) ಬಡ ಮತ್ತು ಮಧ್ಯಮ ವರ್ಗಗಳ ಕುಟುಂಬಗಳು ರೇಸ್ ಪಂದ್ಯದಲ್ಲಿ ಹಣ ಕಳೆದುಕೊಂಡು ಹಾಳಾಗುತ್ತಿರುವುದರಿಂದ, ಸಾರ್ವಜನಿಕ ಹಿತದೃಷ್ಟಿಯಿಂದ ಈಗಿರುವ ರೇಸ್‌ಕೋರ್ಸ್‌ನ್ನು ಹೊರವಲಯಕ್ಕೆ ಸ್ಥಳಾಂತರಿಸಿ ಅಲ್ಲಿ ಅಮ್ಯೂಸ್ಮೆಂಟ್ ಪಾರ್ಕ್ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಈ ವಿಷಯದಲ್ಲಿ ಸರ್ಕಾರದ ಸ್ಪಷ್ಟ ನಿರ್ಧಾರವೇನು ?

## ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಹಣ ನೀಡುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೩೮ (೫೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಪರಿಹಾರ ಪಡೆಯಲು ಯಾವ ಯಾವ ಖಾಯಿಲೆಗಳನ್ನು ಗೊತ್ತುಪಡಿಸಲಾಗಿದೆ ; ಹಾಗಿದ್ದಲ್ಲಿ, ಖಾಯಿಲೆಗಳ ವಿವರ ನೀಡುವುದು ;

(ಆ) ನಿಗದಿತ ಖಾಯಿಲೆಗಳಲ್ಲದೆ ಬೇರೆ ಬೇರೆ ಖಾಯಿಲೆಗಳಿಗೆ ತುತ್ತಾಗಿ ಚಿಕಿತ್ಸೆ ಪಡೆಯುತ್ತಿದ್ದರೆ ಅಥವಾ ಅಪಘಾತಕ್ಕೊಳಗಾಗಿ ಚಿಕಿತ್ಸೆ ಪಡೆಯುತ್ತಿದ್ದರೆ ಅಂಥ ಬಡವರಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಚಿಕಿತ್ಸಾ ವೆಚ್ಚವನ್ನು ನೀಡುವ ಬಗ್ಗೆ ಪರಿಶೀಲಿಸಲಾಗುವುದೇ ;

(ಇ) ಈ ವಿಚಾರದಲ್ಲಿ ಮಾನವೀಯತೆ ದೃಷ್ಟಿಯಿಂದ ಪರಿಶೀಲಿಸಿ ಎಲ್ಲ ಅರ್ಹ ಬಡವರಿಗೂ ಪರಿಹಾರ ನಿಧಿಯಿಂದ ಹಣ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

## ಕರಾವಳಿ ಜಿಲ್ಲೆಗಳಲ್ಲಿ ಪ್ರಚೋಧನಾಕಾರಿ ಭಾಷಣ ಮಾಡಿದ ವ್ಯಕ್ತಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೮೩೫ (೪೮೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಪ್ರಚೋಧನಾಕಾರಿ ಭಾಷಣ ಮಾಡಿದ ವ್ಯಕ್ತಿಗಳ ಮೇಲೆ ಎಷ್ಟು ಕೇಸುಗಳು ದಾಖಲಿಸಲಾಗಿದೆ ; ಎಷ್ಟು ಮಂದಿಯನ್ನು ಬಂಧಿಸಲಾಗಿದೆ ; ದಾಖಲಾದ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕರಾವಳಿ ಜಿಲ್ಲೆಗಳಲ್ಲಿ ಸೌಹರ್ಧತೆಗೆ ಧಕ್ಕೆ ಉಂಟಾಗುವ ವ್ಯಕ್ತಿಗಳಿಗೆ ಭಾಷಣ ಮಾಡಲು ನಿರಾಕರಿಸಿದ ಪ್ರಕರಣಗಳೆಷ್ಟು; ಯಾವ ಯಾವ ಕಾರಣಕ್ಕಾಗಿ ಯಾವ ವ್ಯಕ್ತಿಗಳನ್ನು ನಿರಾಕರಿಸಲಾಗಿದೆ ; (ವಿವರ ನೀಡುವುದು)

(ಇ) ೨೦೦೮ ರಿಂದ ೨೦೧೩ ರವರೆಗೆ ಕರಾವಳಿ ಜಿಲ್ಲೆಗಳಲ್ಲಿ ನಡೆದ ಕೋಮು ಗಲಭೆ ಪ್ರಕರಣಗಳೆಷ್ಟು ; ೨೦೧೩ ರಿಂದ ಇಲ್ಲಿಯವರೆಗೆ ಕರಾವಳಿ ಜಿಲ್ಲೆಗಳಲ್ಲಿ ನಡೆದ ಕೋಮು ಗಲಭೆ ಪ್ರಕರಣಗಳೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿ ಡ್ರಗ್ಸ್ ಮಾಫಿಯವನ್ನು ತಡೆಗಟ್ಟುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೮೪೦ (೪೮೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಡ್ರಗ್ಸ್ ಮಾಫಿಯವನ್ನು ತಡೆಗಟ್ಟಲು ಇಲಾಖೆ ಕೈಗೊಂಡ ಕ್ರಮಗಳೇನು ;

(ಆ) ಕಾಲೇಜು ವಿದ್ಯಾರ್ಥಿಗಳು ಡ್ರಗ್ಸ್ ಮಾಫಿಯಾಗೆ ಬಲಿಯಾಗುತ್ತಿರುವುದು ಇಲಾಖೆ ಗಮನಕ್ಕೆ ಬಂದಿದೆಯೇ ; ಎಷ್ಟು ಕೇಸುಗಳನ್ನು ದಾಖಲಿಸಲಾಗಿದೆ ;

(ಇ) ರಾಜ್ಯದಲ್ಲಿ ಡ್ರಗ್ಸ್ ಸೇವನೆಯಿಂದ ಮೃತಪಟ್ಟ ವ್ಯಕ್ತಿಗಳೆಷ್ಟು; ಅನಧಿಕೃತ ಡ್ರಗ್ಸ್ ಮಾರಾಟ ಮಾಡಿದ ಬಗ್ಗೆ ರಾಜ್ಯದಲ್ಲಿ ನೋಂದಾಯಿಸಿದ ಕೇಸುಗಳೆಷ್ಟು ; ಡ್ರಗ್ಸ್ ಪ್ರಕರಣಗಳಲ್ಲಿ ಶಿಕ್ಷೆಯಾದ ಕೇಸುಗಳ ಸಂಖ್ಯೆ ಎಷ್ಟು ; ಖುಲಾಸೆಗೊಂಡ ಪ್ರಕರಣಗಳೆಷ್ಟು ? (ವಿವರ ನೀಡುವುದು)

# ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಮನೆ ನಿವೇಶನಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೮೪೧ (೪೭೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಮನೆ ನಿವೇಶನಗಳಿಗಾಗಿ ಮಂಗಳೂರು ತಾಲ್ಲೂಕಿನ ಚೇಳ್ಯಾರು ನಡುವೆ ಖರೀದಿಸಿದ ನಿವೇಶನಗಳು ಹಂಚಿಕೆ ಆಗಿವೆಯೇ ; ನಿವೇಶನಗಳಿಗೆ ಯಾರು ಯಾರು ಅರ್ಜಿ ಹಾಕಿದ್ದರು ;

(ಆ) ನಿವೇಶನಗಳನ್ನು ಹಂಚಿಕೆ ಮಾಡದೆ ಇದ್ದರೆ ಕಾರಣಗಳೇನು ; ಯಾವ ಕಾರಣಕ್ಕಾಗಿ ಹಂಚಿಕೆ ಮಾಡಿರುವುದಿಲ್ಲ ; (ವಿವರ ನೀಡುವುದು)

(ಇ) ನಿವೇಶನವನ್ನು ಖರೀದಿಸಲು ಇಲಾಖೆ ಖರ್ಚು ಮಾಡಿದ ಹಣ ಎಷ್ಟು ; ಎಷ್ಟು ವರ್ಷಗಳ ಹಿಂದೆ ಈ ಹಣವನ್ನು ಪಾವತಿಸಲಾಗಿದೆ ; ಹಣ ಪಾವತಿಸಿ ಸ್ಥಳವನ್ನು ನೋಂದಣಿ ಮಾಡಲಾಗಿದೆಯೇ ; ಈ ಬಗ್ಗೆ ಕೈಗೊಂಡ ಕ್ರಮವೇನು ; (ವಿವರ ಒದಗಿಸುವುದು)

(ಈ) ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿವೇಶನ ಹಂಚಿಕೆ ಮಾಡಲು ಯಾವುದಾದರೂ ಯೋಜನೆ ಇಲಾಖೆಯ ಮುಂದಿದೆಯೇ ? (ವಿವರ ನೀಡುವುದು)

## ಸುಪ್ರೀಂ ಕೋರ್ಟ್ ತೀರ್ಪಿನಂತೆ ರಾಷ್ಟ್ರೀಯ ಹೆದ್ದಾರಿಯಿಂದ ಸ್ಥಳಾಂತರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೮೪೨ (೪೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇತ್ತೀಚಿನ ಸುಪ್ರೀಂ ಕೋರ್ಟ್ ತೀರ್ಪಿನಂತೆ ರಾಷ್ಟ್ರೀಯ ಹೆದ್ದಾರಿಯಿಂದ ಸ್ಥಳಾಂತರಗೊಳ್ಳುವ ವೈನ್‌ಶಾಪ್ ಮತ್ತು ಬಾರ್‌ಗಳ ಸಂಖ್ಯೆ ಎಷ್ಟು ;

(ಆ) ನಗರಪಾಲಿಕೆಯಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್ ವ್ಯಾಪ್ತಿಯ ಒಳಗಡೆ ಬರುವ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿ ಎಂದು ಪರಿಗಣಿಸಲಾಗಿದೆಯೇ ;

(ಇ) ಈಗಾಗಲೇ ಸಾಲ ಪಡೆದು ಸ್ವ–ಉದ್ಯೋಗ ಮಾಡುತ್ತಿರುವ ಲೈಸನ್ಸ್‌ದಾರರನ್ನು ರಕ್ಷಿಸಲು ಇಲಾಖೆ ಕೈಗೊಳ್ಳುವ ಕ್ರಮವೇನು ;

(ಈ) ಅಬಕಾರಿ ಇಲಾಖೆಯಲ್ಲಿ ವಾರ್ಷಿಕವಾಗಿ ಸರ್ಕಾರಕ್ಕೆ ಬರುವ ಆದಾಯ ಎಷ್ಟು ; ಆದಾಯವನ್ನು ಹೆಚ್ಚು ಮಾಡಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## 'ಪಿಂಕ್ ಹೊಯ್ಸಳ'ದ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೮೪೩ (೫೬೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರ ಪ್ರದೇಶಗಳಲ್ಲಿ ಮಹಿಳೆಯರು ಮತ್ತು ಮಕ್ಕಳ ಭದ್ರತೆಯ ಹಿತದೃಷ್ಟಿಯಿಂದ ಪ್ರಾರಂಭಿಸಿರುವ 'ಪಿಂಕ್ ಹೊಯ್ಸಳ'ದ ವಿವರಗಳೇನು ; ಎಷ್ಟು ವಾಹನಗಳು ಮತ್ತು ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ಅಥವಾ ನಿಯೋಜಿಸಲಾಗುವುದು ; ಪ್ರತಿ ವಾಹನಗಳಲ್ಲಿರುವ ಮಹಿಳಾ ಪೊಲೀಸ್ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) 'ಪಿಂಕ್ ಹೊಯ್ಸಳ'ದ ದೂರವಾಣಿ ಸಂಖ್ಯೆಯನ್ನು ನಗರದ ಎಲ್ಲಾ ಮಹಿಳೆಯರಿಗೂ ಪ್ರಚಾರ ಮಾಡಿ, ಬಳಕೆ ಮಾಡುವ ವ್ಯವಸ್ಥೆಯನ್ನು ಸರ್ಕಾರ ಮಾಡುವುದೇ ;

(ಇ) ರಾಜ್ಯದ ಪ್ರತಿ ಪೊಲೀಸ್ ಠಾಣೆಗಳಲ್ಲಿ ಮಹಿಳಾ ಪೊಲೀಸ್ ಸಿಬ್ಬಂದಿಯ ಕೊರತೆಯಿರುವುದರಿಂದ ಠಾಣೆಗಳಲ್ಲಿನ ಮಹಿಳಾ ಸಿಬ್ಬಂದಿಗಳನ್ನು ಈ 'ಪಿಂಕ್ ಹೊಯ್ಸಳ'ಕ್ಕೆ ನಿಯೋಜಿಸದೆ, ಸರ್ಕಾರ ಮಹಿಳಾ ಸಿಬ್ಬಂದಿಗಳನ್ನು ಹೊಸದಾಗಿ ನೇಮಕ ಮಾಡಿಕೊಳ್ಳುವುದೇ ?

## ಅನುಕಂಪದ ಆಧಾರದ ನೇಮಕಾತಿಯಲ್ಲಿ ವಿಳಂಬ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೪೪ (೪೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ಇಲಾಖೆಯಡಿ ಅನುಕಂಪದ ಆಧಾರದ ನೇಮಕಾತಿಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿವಿಧ ಇಲಾಖೆಯಲ್ಲಿ ಇದುವರೆವಿಗೂ ಸ್ವೀಕೃತವಾದ ಅನುಕಂಪದ ಆಧಾರದ ನೇಮಕಾತಿ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; ನೇಮಕಾತಿಗೆ ಬಾಕಿಯಿರುವ ಅಭ್ಯರ್ಥಿಗಳೆಷ್ಟು;

(ಇ) ಸಾಕಷ್ಟು ಖಾಲಿ ಹುದ್ದೆಯು ಹೊರತಾಗಿಯೂ, ಅನೇಕ ವರ್ಷಗಳಿಂದ ಅನುಕಂಪದ ಆಧಾರದ ನೇಮಕಾತಿ ಮಾಡದೆ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಈ) ವಿವಿಧ ಇಲಾಖೆಯಲ್ಲಿ ಬಾಕಿಯಿರುವ ಅನುಕಂಪದ ಆಧಾರದ ನೇಮಕಾತಿಯನ್ನು ಶೀಘ್ರವಾಗಿ, ಕಾಲಮಿತಿಯಲ್ಲಿ ಮುಕ್ತಾಯಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಗೃಹರಕ್ಷಕ ದಳದ ಸಿಬ್ಬಂದಿಗಳಿಗೆ ಅಗತ್ಯ ಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೪೫ (೪೯೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಗೃಹರಕ್ಷಕ ದಳದ ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹೀಗೆ ಕಾರ್ಯನಿರ್ವಹಿಸುತ್ತಿರುವ ಗೃಹ ರಕ್ಷಕ ಸಿಬ್ಬಂದಿಗಳಿಗೆ ಯಾವ ಸೌಲಭ್ಯವನ್ನು ನೀಡಲಾಗುತ್ತಿದೆ ;

(ಇ) ಗೃಹರಕ್ಷಕ ಸಿಬ್ಬಂದಿಗಳಿಗೆ ನೀಡುತ್ತಿರುವ ಸೌಲಭ್ಯವು ಅವರ ಜೀವನ ನಿರ್ವಹಣೆಗೆ ಸಾಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) "ಸಮಾನ ಕೆಲಸಕ್ಕೆ ಸಮಾನ ವೇತನ" ಕುರಿತು ಮಾನ್ಯ ಸುಪ್ರೀಂ ಕೋರ್ಟ್ ಆದೇಶವನ್ನು ಗೃಹರಕ್ಷಕ ದಳದ ಸಿಬ್ಬಂದಿಗಳಿಗೆ ಅನ್ವಯಿಸಿ ಕ್ರಮ ಕೈಗೊಳ್ಳುವ ಕುರಿತು ಸರ್ಕಾರದ ನಿಲುವೇನು ?

## ೨೦೧೩ರ ವರ್ಷದಲ್ಲಿ ಮಲ್ಲೇಶ್ವರಂನ ಬಿ.ಜೆ.ಪಿ. ಕೇಂದ್ರ ಕಛೇರಿಯ ರಸ್ತೆಯಲ್ಲಿ ಬಾಂಬ್ ಸ್ಫೋಟಗೊಂಡ ಪ್ರಕರಣದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೮೪೬ (೪೯೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ರಲ್ಲಿ ಮಲ್ಲೇಶ್ವರಂನ ಬಿಜೆಪಿ ಕೇಂದ್ರ ಕಛೇರಿ ರಸ್ತೆಯಲ್ಲಿ ಬಾಂಬ್ ಸ್ಫೋಟ ಪ್ರಕರಣದಲ್ಲಿ ಹಾನಿಗೊಳಗಾದ ಮನೆಗಳ ಸಂಖ್ಯೆ ಎಷ್ಟು ;

(ಆ) ಈ ಸ್ಫೋಟಕ ಪ್ರಕರಣದಲ್ಲಿ ಗಾಯಗೊಂಡ ಸಂತ್ರಸ್ಥರು ಎಷ್ಟು ;

(ಇ) ಈ ಸ್ಫೋಟಕ ಪ್ರಕರಣದಿಂದ ಹಾನಿಗೊಳಗಾದ ಮನೆಯ ಮಾಲೀಕರಿಗೆ ಹಾಗೂ ಗಾಯಗೊಂಡ ಸಂತ್ರಸ್ಥರಿಗೆ ಈವರೆಗೆ ಬಿಡುಗಡೆಯಾದ ಹಣವೆಷ್ಟು ;

(ಈ) ಹಲವಾರು ಸಂತ್ರಸ್ಥರಿಗೆ ಇದುವರೆವಿಗೂ ಪರಿಹಾರ ನೀಡಿಲ್ಲವೆಂಬ ಧ್ವನಿ ಕೇಳಿ ಬರುತ್ತಿದ್ದು, ಇದಕ್ಕೆ ಸರ್ಕಾರದ ಉತ್ತರವೇನು ?

## ಪೊಲೀಸ್ ಠಾಣೆಗಳ ಮುಂದೆ ನಿಲ್ಲಿಸಿರುವ ವಾಹನಗಳು ತುಕ್ಕು ಹಿಡಿದಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೮೪೭ (೪೯೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಪೊಲೀಸ್ ಠಾಣೆಗಳ ಮುಂದೆ ಹಲವಾರು ವಿಧವಾದ ವಾಹನಗಳ ತುಕ್ಕು ಹಿಡಿಯುತ್ತಾ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಪೊಲೀಸ್ ಠಾಣೆಗಳಲ್ಲಿ ಈ ತರಹದ ವಿವಿಧ ಮಾದರಿಯ ಎಷ್ಟು ವಾಹನಗಳು ನಿಂತಿವೆ ; (ವಿವರ ನೀಡುವುದು)

(ಇ) ಈ ವಾಹನಗಳ ಮೇಲೆ ಮೊಕದ್ದಮೆಗಳಿದ್ದಲ್ಲಿ, ಇವುಗಳನ್ನು ಇತ್ಯರ್ಥ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಸರ್ಕಾರದ ಈ ವಿಳಂಬ ನೀತಿಯಿಂದ ಈ ಬೆಲೆ ಬಾಳುವ ವಾಹನಗಳು ಬಳಕೆಗೂ ಬಾರದೆ ಹಾಗೂ ಸರ್ಕಾರವು ಇವುಗಳನ್ನು ಹರಾಜಿಗೆ ಹಾಕದೆ ಅನಾವಶ್ಯಕವಾಗಿ ತುಕ್ಕು ಹಿಡಿಯುವ ಮಟ್ಟಕ್ಕೆ ಬಂದಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಸಂಚಾರಿ ನಿಯಂತ್ರಣದಲ್ಲಿ ಆಗುವ ಲೋಪದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೮೪೮ (೪೯೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗ್ಗೆ ೦೮ ಗಂಟೆಯಿಂದ ಮಧ್ಯಾಹ್ನ ೧೨ ಗಂಟೆಯವರೆಗೆ ಹಾಗೂ ಸಂಜೆ ೦೫ ಗಂಟೆಯಿಂದ ೦೮ ಗಂಟೆಯವರೆಗೆ ವಾಹನ ಚಾಲಕರು ಸಂಚಾರಿ ನಿಯಮ ಉಲ್ಲಂಘಿಸಿದರೂ, ಮೊಕದ್ದಮೆ ಹಾಕದಿರಲು ಮೌಖಿಕವಾಗಿ ಪೊಲೀಸ್ ಸಿಬ್ಬಂದಿಗೆ ನಿರ್ದೇಶನ ನೀಡಿರುವುದಾಗಿ ಕೇಳಿಬರುತ್ತಿದ್ದು, ಇದು ನಿಜವೇ ;

(ಆ) ಈ ಮೇಲೆ ಹೇಳಿದ ಸಮಯದಲ್ಲಿ ರಸ್ತೆಯಲ್ಲಿ ವಾಹನ ಚಾಲಕರು ಕೆಂಪು ದೀಪ ಇದ್ದಾಗ್ಯೂ ವಾಹನಗಳನ್ನು ಚಲಿಸುವುದು, ಜೀಬ್ರಾ ಕ್ರಾಸಿನ ಮೇಲೆ ವಾಹನ ನಿಲ್ಲಿಸುವುದು ಹಾಗೂ ಹಳದಿ ಪಟ್ಟಿಯ

ಉಲ್ಲಂಘನೆ ಮಾಡುತ್ತಿದ್ದರೂ, ಇದನ್ನು ನೋಡಲು ಯಾವುದೇ ಪೊಲೀಸ್ ಸಿಬ್ಬಂದಿಗಳು ಇರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರೀತಿ ಸರ್ಕಾರ ನಿಯಮ ಉಲ್ಲಂಘನೆಯಿಂದ ಹಲವಾರು ಅಪಘಾತಗಳು ಉಂಟಾಗುತ್ತಿದ್ದು, ಇದನ್ನು ನಿಯಂತ್ರಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ರಸ್ತೆಗಳನ್ನು ಸ್ವಚ್ಛಗೊಳಿಸಲು ಸ್ವೀಪಿಂಗ್ ವಾಹನ ಖರೀದಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೮೪೯ (೪೯೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ರಸ್ತೆಗಳ ಕಸ ಗುಡಿಸಲು ಸ್ವೀಪಿಂಗ್ ವಾಹನಗಳನ್ನು ಖರೀದಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದರೆ, ಎಷ್ಟು ವಾಹನಗಳನ್ನು ಯಾವ ಕಂಪನಿಯಿಂದ ಎಷ್ಟು ಮೊತ್ತದಲ್ಲಿ ಖರೀದಿಸಲಾಗುವುದು ;

(ಇ) ಈ ಖರೀದಿಗೆ ಸಂಬಂಧಿಸಿದ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಈ) ದೊಡ್ಡ ಮೊತ್ತದ ಇಂತಹ ವಾಹನಗಳನ್ನು ಖರೀದಿಸುವುದಕ್ಕಿಂತಲೂ ಪೌರ ಕಾರ್ಮಿಕರಿಂದ ನಿಯಮಿತವಾಗಿ ಸ್ವಚ್ಛಗೊಳಿಸುವ ಕ್ರಮದಿಂದ ಪಾಲಿಕೆಗೆ ಸಾಕಷ್ಟು ಹಣದ ಉಳಿತಾಯವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಪೊಲೀಸ್ ಠಾಣೆಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೮೫೦ (೪೯೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಒಟ್ಟು ಟ್ರಾಫಿಕ್ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು ;

(ಆ) ಈ ಪೊಲೀಸ್ ಠಾಣೆಗೆ ಮಂಜೂರಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವರ್ಗಾವಾರು ವಿವರ ನೀಡುವುದು)

(ಇ) ಹಾಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವರ್ಗಾವಾರು ವಿವರ ನೀಡುವುದು)

(ಈ) ಈಗಾಗಲೇ ಬೆಂಗಳೂರು ಸಂಚಾರಿ ವಲಯದಲ್ಲಿ ಹಲವಾರು ನಿಯಮ ಉಲ್ಲಂಘನೆ ಪ್ರಕರಣಗಳು ಹೆಚ್ಚುತ್ತಿದ್ದು, ಸಿಬ್ಬಂದಿಯ ಕೊರತೆಯಿಂದ ಆಗುವ ಅನಾಹುತಗಳನ್ನು ಸರಿಪಡಿಸಲು ಸರ್ಕಾರ ತೆಗೆದುಗೊಂಡ ಕ್ರಮವೇನು?

## ರಾಜ್ಯದಲ್ಲಿ ಮಕ್ಕಳ ಮತ್ತು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯಗಳು ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೧ (೫೩೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯಗಳು ಹಾಗೂ ಮಹಿಳೆಯರ ಮೇಲಿನ ಲೈಂಗಿಕ ಶೋಷಣೆಗಳು ಮೇಲಿಂದ ಮೇಲೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದರೆ, ೨೦೧೫–೧೬, ೨೦೧೬–೧೭ನೇ ಸಾಲಿನಲ್ಲಿ ರಾಜ್ಯದಲ್ಲಿ ವರದಿಯಾದ ಪ್ರಕರಣಗಳ ಸಂಖ್ಯೆ ಎಷ್ಟು; ಅದರಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ವರದಿಯಾದ ಪ್ರಕರಣಗಳು ಎಷ್ಟು; ಯಾವುವು; (ವಿವರ ನೀಡುವುದು)

(ಇ) ಇಂತಹ ಎಷ್ಟು ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆಯಾಗಿದೆ; ಎಷ್ಟು ಪ್ರಕರಣಗಳೂ ಖುಲಾಸೆಯಾಗಿವೆ; (ವಿವರ ನೀಡುವುದು)

(ಈ) ಇಂತಹ ಪ್ರಕರಣಗಳೂ ಮತ್ತೆ ಮರುಕಳಿಸದಂತೆ ತಡೆಯುವ ನಿಟ್ಟಿನಲ್ಲಿ ಯಾವ ಯಾವ ಮುನ್ನೆಚ್ಚರಿಕಾ ಕ್ರಮಗಳನ್ನು ಸರ್ಕಾರವು ಕೈಗೊಂಡಿದೆ; ಕೈಗೊಂಡ ಕ್ರಮಗಳ ರೂಪುರೇಷೆಗಳನ್ನು ವಿವರಿಸುವುದು;

(ಉ) ಶಾಲಾ ಮಕ್ಕಳ ಮೇಲೆಯೇ ಇಂತಹ ಪ್ರಕರಣಗಳು ಹೆಚ್ಚಾಗುತ್ತಿದ್ದು, ಇದನ್ನು ತಡೆಯುವ ನಿಟ್ಟಿನಲ್ಲಿ ಇಂತಹ ಪ್ರಕರಣಗಳಿಗೆ ಶಾಲಾ ಮುಖ್ಯಸ್ಥರನ್ನು ಮತ್ತು ಶಾಲಾ ಆಡಳಿತ ಮಂಡಳಿಯನ್ನೇ ಹೊಣೆಗಾರರನ್ನಾಗಿಸುವ ಕ್ರಮವನ್ನು ಸರ್ಕಾರವು ತೆಗೆದುಕೊಳ್ಳುತ್ತದೆಯೇ; ಅವರುಗಳಿಗೆ ಸರ್ಕಾರವು ವಿಧಿಸಿರುವ ನಿಯಮಾವಳಿಗಳೇನು?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಆರ್ಥಿಕ ಮುಗ್ಗಟ್ಟು ಎದುರಿಸುತ್ತಿರುವ ಬಗ್ಗೆ.

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೨ (೫೭೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸಾರ್ವಜನಿಕ ಆಸ್ತಿಯನ್ನು ಅಡವಿಟ್ಟು ಸಾಲ ಪಡೆದಿರುವುದು ಹಾಗೂ ಆರ್ಥಿಕ ಮುಗ್ಗಟ್ಟು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಯಾವ ಯಾವ ಬ್ಯಾಂಕ್‌ಗಳಿಂದ ಎಷ್ಟೆಷ್ಟು ಸಾಲ ಪಡೆಯಲಾಗಿದೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಒಟ್ಟು ವಾರ್ಷಿಕ ಆಯವ್ಯಯವೆಷ್ಟು; (ಕಳೆದ ೫ ವರ್ಷಗಳ ವಿವರ ನೀಡುವುದು)

(ಇ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ೨೦೧೫–೧೬ ಹಾಗೂ ೨೦೧೬–೧೭ನೇ ಸಾಲಿನ ವಾರ್ಷಿಕ ವರದಿಯ ವಿವರ ನೀಡುವುದು; ಸರ್ಕಾರವು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿವೃದ್ದಿಗೆ ವಾರ್ಷಿಕ ಎಷ್ಟು ಅನುದಾನ ಒದಗಿಸುತ್ತದೆ;

(ಈ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಈಗಿನ ಸ್ಥಿತಿಗೆ ಕಾರಣಗಳೇನು; ಸದರಿ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ಏನು ಕ್ರಮಗಳನ್ನು ಕೈಗೊಳ್ಳಲಿದೆ; ಸಾರ್ವಜನಿಕರು ಪಾವತಿಸಿದ ಠೇವಣಿ ಹಣ ಏನಾಯಿತು? (ವಿವರ ನೀಡುವುದು)

## ಬೆಳಗಾವಿ ಮಹಾನಗರ ಪಾಲಿಕೆಯು ಅನುದಾನದ ಕೊರತೆಯಿಂದ ಆರ್ಥಿಕ ಮುಗ್ಗಟ್ಟು ಎದುರಿಸುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೩ (೫೩೧) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಮಹಾನಗರ ಪಾಲಿಕೆಯು ಅನುದಾನದ ಕೊರತೆಯಿಂದ ಆರ್ಥಿಕ ಮುಗ್ಗಟ್ಟನ್ನು ಎದುರಿಸುತ್ತಿದ್ದು, ಸಿಬ್ಬಂದಿಗೆ ಸಂಬಳ ನಿವೃತ್ತಿ ವೇತನವೂ ಸರಿಯಾಗಿ ಪಾವತಿಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅಭಿವೃದ್ಧಿಗಾಗಿ ಬರಬೇಕಿದ್ದ ೭೦ ಕೋಟಿಗೂ ಅಧಿಕ ಮೊತ್ತದ ಅನುದಾನ ಸರ್ಕಾರದ ಬಳಿಯೇ ಉಳಿಸಿಕೊಳ್ಳಲು ಕಾರಣಗಳೇನು; (ವಿವರ ನೀಡುವುದು)

(ಇ) ಪಾಲಿಕೆಗಳು ತಮ್ಮ ಜವಾಬ್ದಾರಿ ಮತ್ತು ಅಭಿವೃದ್ಧಿ ಮರೆತು ಅಧಿಕಾರಕ್ಕಾಗಿ ಕಿತ್ತಾಡುತ್ತಿದ್ದರೆ, ಸರ್ಕಾರವು ಏನು ಕ್ರಮ ವಹಿಸುವುದು; (ವಿವರ ನೀಡುವುದು)

(ಈ) ಪಾಲಿಕೆಯ ಆಡಳಿತ ಮಂಡಳಿಯ ನಿರ್ಲಕ್ಷತೆಯಿಂದ ಸಾರ್ವಜನಿಕ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿರುವುದನ್ನು ಸರ್ಕಾರವು ಗಮನಿಸಿದೆಯೇ; ಇದನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ? (ವಿವರ ನೀಡುವುದು)

## ರಾಜ್ಯದಲ್ಲಿ ಸೈಬರ್ ಕ್ರೈಂಗಳು, ಆನ್ ಲೈನ್ ವಂಚನೆಗಳು ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೪ (೫೨೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಆನ್‌ಲೈನ್ ವ್ಯವಹಾರಗಳು ಹೆಚ್ಚಾದಂತೆ, ಸೈಬರ್ ಕ್ರೈಂಗಳು, ಆನ್ ಲೈನ್ ವಂಚನೆಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಆನ್‌ಲೈನ್ ವಂಚನೆಗೊಳಗಾದ ಶೋಷಿತರು ಪೊಲೀಸರಿಗೆ ದೂರು ಸಲ್ಲಿಸಲು ಠಾಣೆಯಿಂದ, ಠಾಣೆಗೆ ಅಲೆದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸೈಬರ್ ಕ್ರೈಂಗಳನ್ನೇ ನೋಡಿಕೊಳ್ಳಲು ಮತ್ತು ಅವುಗಳನ್ನು ನಿರ್ವಹಿಸಲು ಸರ್ಕಾರವು ಪ್ರತ್ಯೇಕ ನುರಿತ ತಜ್ಞರ ಪೋಲೀಸ್ ಪಡೆಯನ್ನು ಸೃಷ್ಠಿಸಿದೆಯೇ; ಅವರು ಎಲ್ಲಿ ಕೆಲಸ ನಿರ್ವಹಿಸುತ್ತಾರೆ. ಎಲ್ಲಿ ದೂರುಗಳನ್ನು ಸ್ವೀಕರಿಸುತ್ತಾರೆ; ಆನ್ ಲೈನ್‌ನಲ್ಲಿಯೇ ದೂರು ನೀಡಬಹುದೇ; ಇದರ ಬಗ್ಗೆ ಸಾಮಾನ್ಯ ನಾಗರಿಕರಿಗೆ ಸೂಕ್ತ ಮಾಹಿತಿ ನೀಡಲು ಸರ್ಕಾರವು ಏನು ಕ್ರಮಗಳನ್ನು ಕೈಗೊಂಡಿದೆ; (ವಿವರ ನೀಡುವುದು)

(ಈ) ಈಗಾಗಲೇ ಇಂತಹ ಎಷ್ಟು ಪ್ರಕರಣಗಳು ವರದಿಯಾಗಿವೆ; ಎಷ್ಟು ಪ್ರಕರಣಗಳಲ್ಲಿ ವಂಚಕರಿಗೆ ಶಿಕ್ಷೆಯಾಗಿದೆ; ಇಂತಹ ಪ್ರಕರಣಗಳಿಗೆ ಕಡಿವಾಣ ಹಾಕಲು ಸರ್ಕಾರವು ಯಾವ ಯಾವ ಕ್ರಮಗಳನ್ನು ತೆಗೆದುಕೊಂಡಿದೆ? (ವಿವರ ನೀಡುವುದು)

## ರಾಜ್ಯ ಸರ್ಕಾರಿ ನೌಕರರ ಜ್ಯೋತಿ ಸಂಜೀವಿನಿ ಯೋಜನೆಯ ಬಗ್ಗೆ

**ಶ್ರೀ ಕೆ.ಟಿ, ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೮೫೫ (೫೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರಿ ನೌಕರರ ಜ್ಯೋತಿ ಸಂಜೀವಿನಿ ಯೋಜನೆ ಯಾವಾಗಿನಿಂದ ಜಾರಿಗೆ ಬಂದಿದೆ;

(ಆ) ಈ ಯೋಜನೆಯ ವ್ಯಾಪ್ತಿಗೆ ರಾಜ್ಯದ ಯಾವ ಯಾವ ಆಸ್ಪತ್ರೆಗಳು ಒಳಪಟ್ಟಿವೆ; (ವಿವರ ನೀಡುವುದು)

(ಇ) ಈ ಯೋಜನೆಯಲ್ಲಿ ಯಾವ ಖಾಯಿಲೆಗಳಿಗೆ ನಗದು ರಹಿತ ಚಿಕಿತ್ಸೆ ಪಡೆಯಬಹುದು;

(ಈ) ಈ ಯೋಜನೆಯ ವ್ಯಾಪ್ತಿಯನ್ನು ಈ ಖಾಯಿಲೆಗಳನ್ನು ಹೊರತುಪಡಿಸಿ ಉಳಿದ ಖಾಯಿಲೆಗಳಿಗೆ ವಿಸ್ತರಿಸಲು ಸರ್ಕಾರ ಆಲೋಚಿಸಿದೆಯೇ; ಆಲೋಚಿಸಿದ್ದಲ್ಲಿ ಏನು ಕ್ರಮವಹಿಸಿದೆ;

(ಉ) ಈ ಯೋಜನೆಯ ಬಗ್ಗೆ ದೂರು/ಸಲಹೆಗಳಿಗಾಗಿ ನೌಕರರಿಗೆ ಅನುಕೂಲವಾಗುವಂತೆ ಸರ್ಕಾರ ಸಹಾಯವಾಣಿ ಅಥವಾ ಸಹಾಯ ಕೇಂದ್ರವನ್ನು ಸ್ಥಾಪಿಸಿದೆಯೇ; ಇಲ್ಲವಾದಲ್ಲಿ ಸ್ಥಾಪಿಸಲು ಉದ್ದೇಶಿಸಿದೆಯೇ?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಹೊಸ ಪೊಲೀಸ್ ಠಾಣೆಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು ಕ್ಷೇತ್ರ) :–**

೮೫೬ (೫೮೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಎಷ್ಟು ಹೊಸ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಎಷ್ಟು ಅತ್ಯಾಚಾರ ಪ್ರಯತ್ನಗಳು, ಕೊಲೆ ಯತ್ನ, ದರೋಡೆ, ಕಳ್ಳತನ, ಮೋಸ, ವಂಚನೆ ಪ್ರಕರಣಗಳು ದಾಖಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಮಹಿಳಾ ಅಪರಾಧ ಪ್ರಕರಣಗಳನ್ನು ಪರಿಶೀಲಿಸಲು ಮಹಿಳಾ ಪೊಲೀಸ್ ಠಾಣೆ ಸ್ಥಾಪಿಸಲು ಮತ್ತು ಪ್ರಮುಖ ಬಡಾವಣೆಗಳ ಮುಖ್ಯ ರಸ್ತೆಗಳಲ್ಲಿ

ಸಿ.ಸಿ. ಕ್ಯಾಮರ ಅಳವಡಿಸಲು ಸರ್ಕಾರ ಉದ್ದೇಶಿಸಿದೆಯೇ; ಉದ್ದೇಶಿಸಿದ್ದರೆ, ಇದನ್ನು ಯಾವಾಗಿನಿಂದ ಜಾರಿಗೆ ತರಲಾಗುವುದು? (ವಿವರವಾದ ಮಾಹಿತಿ ನೀಡುವುದು)

## ನೇಕಾರ ಸಹಕಾರ ಸಂಘಗಳ ಅಸ್ಥಿತ್ವದ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೫೭ (೫೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಸ್ಥಿತ್ವದಲ್ಲಿರುವ ಸಹಕಾರ ಸಂಘಗಳು ಎಷ್ಟು;

(ಆ) ಸದರಿ ಸಂಘಗಳಿಗೆ ಸರ್ಕಾರದಿಂದ ಅನುದಾನ ನೀಡಲಾಗುತ್ತಿದೆಯೇ;

(ಇ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ನಿಗಧಿಪಡಿಸಿರುವ ಅನುದಾನ ಎಷ್ಟು;

(ಈ) ರಾಜ್ಯದಲ್ಲಿರುವ ನೇಕಾರ ಸಹಕಾರ ಸಂಘಗಳು ಎಷ್ಟು ಅವು ಯಾವುವು? (ತಾಲ್ಲೂಕುವಾರು, ವಿಳಾಸಸಹಿತ ಸಂಘಗಳ ವಿವರ ನೀಡುವುದು)

## ಯಶಸ್ವಿನಿ ಆರೋಗ್ಯ ವಿಮಾ ಯೋಜನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೫೮ (೫೨೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯ ಸದಸ್ಯತ್ವವನ್ನು ಹೊಂದಿರುವವರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯ ಪ್ರಯೋಜನ ಪಡೆದ ರೋಗಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಜಿಲ್ಲೆಯಲ್ಲಿ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯಡಿಯಲ್ಲಿ ಚಿಕಿತ್ಸೆ ನೀಡುವ ಆಸ್ಪತ್ರೆಗಳು ಯಾವುವು? (ತಾಲ್ಲೂಕುವಾರು ವಿವರ ನೀಡುವುದು)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಬದಲಿ ನಿವೇಶನ ಹಂಚಿಕೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೫೯ (೫೧೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿರಿಯ ನಾಗರಿಕರಿಗೆ ಮಾಜಿ ಸೈನಿಕರಿಗೆ, ಅಂಗವಿಕಲರಿಗೆ, ಸಮಾಜ ಸೇವಕರಿಗೆ, ನಿವೇಶನ ನೀಡಲು ಇರುವ ಮಾನದಂಡಗಳೇನು;

(ಆ) ಸಾರ್ವಜನಿಕರಿಗೆ ನೀಡಿದ ನಿವೇಶನ ತಕರಾರಾಗಿದ್ದಲ್ಲಿ, ಆ ನಿವೇಶನಕ್ಕೆ ಬದಲಿ ನಿವೇಶನ ಹಂಚಿಕೆ ಮಾಡಲು ವಿಳಂಬವಾಗಿರಲು ಕಾರಣವೇನು;

(ಇ) ದೂರುಗಳು ಬಂದ ಎಷ್ಟು ದಿನಗಳಲ್ಲಿ ಬಗೆಹರಿಸಲಾಗುವುದು?

## ಪೌರ ಕಾರ್ಮಿಕರ ಸುರಕ್ಷತೆ ಹಾಗೂ ರಕ್ಷಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೬೦ (೫೧೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಟ್ಟಣ ಪಂಚಾಯಿತಿ, ಪುರಸಭೆ, ನಗರಪಾಲಿಕೆಗಳಲ್ಲಿ ಪೌರ ಕಾರ್ಮಿಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಕೆಲಸಗಾರರಿಗೆ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಅವರ ಆರೋಗ್ಯ ಮತ್ತು ಸುರಕ್ಷತೆಯ ದೃಷ್ಟಿಯಿಂದ ಸ್ಥಳೀಯ ಸಂಸ್ಥೆಗಳು ನೀಡಿರುವ ಅನುಕೂಲತೆಗಳಾವುವು;

(ಆ) ನಗರ ಪಾಲಿಕೆಗಳಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಅವರ ಸುರಕ್ಷತೆಯ ದೃಷ್ಟಿಯಿಂದ ಈ ರೀತಿಯ ಪೂರಕ ಅನುಕೂಲತೆಗಳನ್ನು ಇದುವರೆಗೂ ಒದಗಿಸದೆ ಇರುವ ನಗರ ಪಾಲಿಕೆಗಳು ಯಾವುವು; (ವಿವರಗಳನ್ನು ಒದಗಿಸುವುದು)

(ಇ) ಈ ರೀತಿಯ ಅನುಕೂಲತೆಗಳನ್ನು ಒದಗಿಸದಿರುವ ಸ್ಥಳೀಯ ಸಂಸ್ಥೆಗಳು ಮುಂದೆ ತೆಗೆದುಕೊಳ್ಳುವ ಕ್ರಮಗಳೇನು?

## ಸಹಕಾರಿ ಸಂಘದ ಮೇಲೆ ಹತೋಟಿಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೧ (೪೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರಿ ವಲಯದ ವಿವಿಧ ಸೊಸೈಟಿಗಳು, ಬ್ಯಾಂಕ್‌ಗಳು, ಫೆಡರೇಷನ್‌ಗಳು, ಸಂಘಗಳು, ಇತ್ಯಾದಿಗಳ ಆಡಳಿತಾತ್ಮಕ ಹಾಗೂ ಆರ್ಥಿಕ ವ್ಯವಹಾರಗಳ ಮೇಲೆ ಜಿಲ್ಲಾ ಮಟ್ಟದಲ್ಲಿ ಸಹಕಾರ ಇಲಾಖೆಯು ಅಧಿಕಾರಿಗಳು, ನಿಯಂತ್ರಣವನ್ನು ಹೊಂದಿರುತ್ತಾರೆಯೇ;

(ಆ) ಯಾವುದೇ ಸಮಸ್ಯೆಗಳು, ದೂರುಗಳಿದ್ದಲ್ಲಿ ಆಯಾ ಜಿಲ್ಲೆಯಲ್ಲಿ ಜಿಲ್ಲಾ ಮಟ್ಟದ ಇಲಾಖಾ ಅಧಿಕಾರಿಯವರನ್ನೇ ಒಂಬಡ್ಸಮನ್ ಆಗಿ ನೇಮಿಸಿದ್ದಲ್ಲಿ ಸದರಿ ಸಂಘಗಳ ಮೇಲೆ ಜನರಲ್ಲಿ ಹೆಚ್ಚು ವಿಶ್ವಾಸ ಮೂಡುವಿಕೆ ಸಾಧ್ಯವೆಂದು ಸರ್ಕಾರ ಗಮನಿಸಿದೆಯೇ; ಈ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು?

## ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಗ್ರೂಪ್ ಎ ಮತ್ತು ಬಿ ಶ್ರೇಣಿಯ ಅಧಿಕಾರಿಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೨ (೪೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಕೆ.ಎ.ಎಸ್., ಕೆ.ಎ.ಎಸ್.ಗೆ ಸಮಾನಂತರ ಗ್ರೂಪ್ ಎ ಮತ್ತು ಬಿ ಶ್ರೇಣಿ ಅಧಿಕಾರಿಗಳ ಸಂಖ್ಯೆ ಎಷ್ಟು; ಅವರು ಯಾವ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ; ಅವರು ಸೇವೆಗೆ ಸೇರಿದ ದಿನಾಂಕ ಮತ್ತು ನಿವೃತ್ತಿಯ ದಿನಾಂಕ ಯಾವುದು; ಇವರಲ್ಲಿ ನೇರ ನೇಮಕಾತಿ ಹೊಂದಿದವರ ಮತ್ತು ಬಡ್ತಿಯಿಂದ ಸ್ಥಾನ ಪಡೆದವರ ಸಂಖ್ಯೆ ಎಷ್ಟು; (ಇಲಾಖಾವಾರು, ಹುದ್ದೆವಾರು, ಹೆಸರುವಾರು, ಮಾಹಿತಿ ಒದಗಿಸುವುದು)

(ಆ) ಈ ಅಧಿಕಾರಿಗಳಲ್ಲಿ ಇಲಾಖಾ ತನಿಖೆಕೆ ಒಳಪಟ್ಟಿರುವವರ ಸಂಖ್ಯೆ ಎಷ್ಟು; ಕ್ರಿಮಿನಲ್ ಪ್ರಕರಣ ದಾಖಲಾಗಿರುವವರ ಸಂಖ್ಯೆ ಎಷ್ಟು; ಅವರ ವಿರುದ್ಧ ಜರುಗಿಸಿದ ಕ್ರಮವೇನು? (ಹುದ್ದೆವಾರು ಹೆಸರುಗಳು, ಇಲಾಖಾ ತನಿಖೆವಾರು ಮಾಹಿತಿ ನೀಡುವುದು)

## ನಿರುಪಯುಕ್ತ ಸರ್ಕಾರಿ ವಾಹನಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೩ (೪೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ಸರ್ಕಾರಿ ಇಲಾಖೆಗಳಲ್ಲಿರುವ ಉಪಯೋಗಕ್ಕೆ ಯೋಗ್ಯವಲ್ಲದ ಒಟ್ಟು ಸರ್ಕಾರಿ ವಾಹನಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಇಲಾಖಾವಾರು ವಿವರ ನೀಡುವುದು)

(ಆ) ಇಂತಹ ವಾಹನಗಳನ್ನು ನಿರುಪಯುಕ್ತವೆಂದು ಪರಿಗಣಿಸಲು ಹಾಗೂ ಹರಾಜು ಮಾಡಲು ಇರುವ ಮಾನದಂಡಗಳೇನು;

(ಇ) ಇಂತಹ ವಾಹನಗಳನ್ನು ಹರಾಜು ಮಾಡದೆ ಇರುವುದರಿಂದ ಇವುಗಳು ತುಕ್ಕು ಹಿಡಿಯುತ್ತಿರುವುದು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು?

## ಗ್ರಾಮ ಪಂಚಾಯತ್‌ನ ಆಡಳಿತ ವಿವಿಧ ಪ್ರಕರಣಗಳಲ್ಲಿ ದೂರು ನೀಡಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೪ (೪೮೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ಇಲಾಖೆಗಳಲ್ಲಿ ನೀಡಿರುವ ದೂರುಗಳ ಸಂಖ್ಯೆ ಎಷ್ಟು; ಮತ್ತು ಇವುಗಳಲ್ಲಿ ಪ್ರಥಮ ವರ್ತಮಾನ ವರದಿ ದಾಖಲಿಸಲ್ಪಟ್ಟ ದೂರಗಳ ಸಂಖ್ಯೆ ಎಷ್ಟು, ಅವು ಯಾವುವು; (ವರ್ಷಾವಾರು, ಇಲಾಖಾವಾರು, ಠಾಣಾವಾರು, ಪ್ರಕರಣವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಗ್ರಾಮ ಪಂಚಾಯತ್‌ಗಳ ಅಭಿವೃದ್ಧಿ ಅಧಿಕಾರಿಗಳು ನೀಡಿದ ದೂರುಗಳ ಸಂಖ್ಯೆ ಎಷ್ಟು; ಅವು ಯಾವುವು; ಮತ್ತು ಇವುಗಳಲ್ಲಿ ಪ್ರಥಮ ವರ್ತಮಾನ ವರದಿ ದಾಖಲಿಸಲ್ಪಟ್ಟ ದೂರುಗಳ ಸಂಖ್ಯೆ ಎಷ್ಟು; ಅವು ಯಾವುವು; (ಪ್ರಕರಣವಾರು ವಿವರ ನೀಡುವುದು) (ವರ್ಷವಾರು, ಠಾಣಾವಾರು, ಪ್ರಕರಣವಾರು ವಿವರ ನೀಡುವುದು)

(ಇ) ಗ್ರಾಮ ಪಂಚಾಯತಿಯ ನಿರ್ಣಯ, ದಾಖಲೆಗಳು ಇದ್ದರೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರ ದೂರು ಸ್ವೀಕರಿಸಲು ನಿರಾಕರಣೆ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು; ಗ್ರಾಮ ಪಂಚಾಯತ್‌ನವರ ಮನವಿಯ ಹೊರತಾಗಿಯೂ ಪಂಚಾಯತ್ ಆಡಳಿತದೊಂದಿಗೆ ಪೊಲೀಸ್ ಇಲಾಖೆ ಸಹಕರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಠಾಣಾವಾರು, ಪ್ರಕರಣವಾರು, ವಿವರ ನೀಡುವುದು)

## ರಾಜ್ಯದಲ್ಲಿನ ನಗರ ಯೋಜನಾ ಪ್ರಾಧಿಕಾರಗಳ ಅಧಿಕಾರ ಹಾಗೂ ಕರ್ತವ್ಯಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬೫ (೪೮೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಯೋಜನಾ ಪ್ರಾಧಿಕಾರಗಳ ಸಂಖ್ಯೆ ಎಷ್ಟು; ಅವು ಯಾವುವು; ಸದರಿ ಪ್ರಾಧಿಕಾರಗಳಿಗಿರುವ ಅಧಿಕಾರ ಮತ್ತು ಕರ್ತವ್ಯಗಳೇನು; (ಪ್ರತಿ ಒದಗಿಸುವುದು)

(ಆ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಯೋಜನಾ ಪ್ರಾಧಿಕಾರಗಳಲ್ಲಿ ಗುತ್ತಿಗೆಯಾಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇವರುಗಳ ಸೇವಾ ಖಾಯಂಯಾತಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ನಗರ ಯೋಜನಾ ಪ್ರಾಧಿಕಾರವಾರು ವಿವಿರ ನೀಡುವುದು)

(ಇ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಯೋಜನಾ ಪ್ರಾಧಿಕಾರಗಳ ಅಧ್ಯಕ್ಷರುಗಳಿಗೆ ಇರುವ ಸವಲತ್ತು ಮತ್ತು ಸೌಲಭ್ಯಗಳೇನು? (ಪ್ರತಿ ಒದಗಿಸುವುದು)

## ಸರ್ಕಾರಕ್ಕೆ ವಿವಿಧ ಮೂಲಗಳಿಂದ ಬರುವ ಆದಾಯ ತೆರಿಗೆಯ ಬಗ್ಗೆ

**ಶ್ರೀ ಬಿ.ಜೆ.ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೬೬ (೫೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಕ್ಕೆ ಆದಾಯ ತೆರಿಗೆ (Tax) ಮತ್ತು ಇತರೆ ವಿವಿಧ ಮೂಲಗಳಿಂದ ಆದಾಯ ಬರುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ಅಂತಹ ಮೂಲಗಳು ಯಾವುವು; ಯಾವ ಯಾವ ಮೂಲಗಳಿಂದ ಎಷ್ಟು ಹಣ ಸಂಗ್ರಹವಾಗುತ್ತಿದೆ; ಆಯವ್ಯಯದಲ್ಲಿ ಅಂದಾಜಿಸಿದ ಮೊತ್ತ ಎಷ್ಟು; ಭೌತಿಕವಾಗಿ ಬಂದಿರುವ ಮೊತ್ತ ಎಷ್ಟು? (೨೦೧೩ ರಿಂದ ೨೦೧೭ ರವರೆಗೆ ವರ್ಷಾವಾರು ವಿವರ ನೀಡುವುದು)

## ದುರ್ಬಲ ವರ್ಗದವರಿಗೆ ಪ್ರೋತ್ಸಾಹ ಧನ ನೀಡುವ ಬಗ್ಗೆ

**ಶ್ರೀ ಬಿ.ಜೆ.ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೬೭ (೫೫೨) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಕಲ್ಯಾಣ ಕಾರ್ಯಕ್ರಮಗಳ ಯೋಜನೆಯಡಿ ದುರ್ಬಲ ವರ್ಗದವರಿಗೆ ಆಟೋ, ಗೂಡ್ಸ್ ವಾಹನ, ಕಾರು ಮತ್ತು ಅಂಗವಿಕಲರಿಗೆ ತ್ರಿಚಕ್ರ ವಾಹನಗಳನ್ನು ಖರೀದಿಸಲು ಪ್ರೋತ್ಸಾಹ ಧನ ನೀಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ಈ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು; ವಿಳಂಬಕ್ಕೆ ಕಾರಣವೇನು? (೨೦೧೫–೧೬ ಮತ್ತು ೨೦೧೬–೧೭ ರವರೆಗಿನ ವಲಯವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಹೆಚ್ಚುತ್ತಿರುವ ಕೊಲೆ ಪ್ರಕರಣಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೬೮ (೫೪೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೪ ವರ್ಷಗಳಲ್ಲಿ ಹಲವಾರು ಕೊಲೆಗಳು ಆಗಿದ್ದು, ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕೊಲೆ ಪ್ರಕರಣಗಳ ಸಂಖ್ಯೆ ಎಷ್ಟು; ಆ ಪೈಕಿ ಅಪರಾಧಿಗಳನ್ನು ಪತ್ತೆ ಹಚ್ಚಿ ಬಂಧಿಸಲಾಗಿರುವ ಪ್ರಕರಣಗಳ

ಸಂಖ್ಯೆ ಎಷ್ಟು; ಬಂಧನಕ್ಕೆ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಕೊಲೆಯಾದವರ ಕುಟುಂಬಕ್ಕೆ ಪರಿಹಾರಧನ ನೀಡಲಾಗಿದೆಯೇ; ಪರಿಹಾರಧನ ಎಷ್ಟು ಜನರಿಗೆ/ಕುಟುಂಬಗಳಿಗೆ ನೀಡಲಾಗಿದೆ; ಬಾಕಿ ಇರುವ ಸಂಖ್ಯೆ ಎಷ್ಟು;

(ಇ) ದಿನಾಂಕ: ೨೨-೧೦-೨೦೧೬ರಂದು ಮಂಗಳೂರು ನಗರ ಕೊಣಾಜೆ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಕಾರ್ತಿಕ್ ರಾಜ್ ಎಂಬಾತನ ಕೊಲೆ ಆಗಿರುವುದು ನಿಜವೇ; ಕೊಲೆ ಮಾಡಿದವರ ಬಂಧನವಾಗಿದೆಯೇ; ಬಂಧನಕ್ಕೆ ವಿಳಂಬವಾಗಲು ಕಾರಣಗಳೇನು; ಕಾರ್ತಿಕ್ ರಾಜ್ ಕುಟುಂಬಕ್ಕೆ ಪರಿಹಾರಧನ ನೀಡಲಾಗಿದೆಯೇ; ಇಲ್ಲವಾದರೆ, ಈವರೆವಿಗೂ ಪರಿಹಾರಧನ ನೀಡದಿರಲು ಕಾರಣವೇನು?

## ರೈತರಿಗೆ ವಿವಿಧ ಶ್ರೇಣಿಯ ಬಡ್ಡಿ ದರದಲ್ಲಿ ಕೃಷಿ ಸಾಲದ ಬಗ್ಗೆ

**ಶ್ರೀ ಬಿ.ಜೆ.ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೬೯ (೫೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಹಕಾರ ಇಲಾಖೆಯಿಂದ ರೈತರಿಗೆ ವಿವಿಧ ಶ್ರೇಣಿಯ ಬಡ್ಡಿ ದರದಲ್ಲಿ ಕೃಷಿ ಸಾಲ ನೀಡಲಾಗುತ್ತಿದೆಯೇ; ನೀಡುತ್ತಿದ್ದರೆ. ೨೦೧೪ರಿಂದ ೧೭ರವರೆಗೆ ವಿವಿಧ ಶ್ರೇಣಿಯಲ್ಲಿ ನೀಡಿರುವ ಒಟ್ಟು ಸಾಲದ ಮೊತ್ತ ಮತ್ತು ಫಲಾನುಭವಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಆ ಸಾಲದ ವಿತರಣೆಯಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರ ಒಟ್ಟು ಫಲಾನುಭವಿಗಳ ಸಂಖ್ಯೆ ಮತ್ತು ಸಾಲದ ಒಟ್ಟು ಮೊತ್ತ ಎಷ್ಟು; (ವಿವರ ನೀಡುವುದು)

(ಇ) ಒಟ್ಟು ಸಾಲ ಪಡೆದ ಫಲಾನುಭವಿಗಳಲ್ಲಿ ಹೊಸ ಫಲಾನುಭವಿಗಳ ಸಂಖ್ಯೆ ಮತ್ತು ಅವರು ಪಡೆದ ಮೊತ್ತವೆಷ್ಟು;

(ಈ) ೨೦೧೪ ರಿಂದ ೧೭ ರವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ವಿತರಿಸಿದ ಸಾಲದ ಮೊತ್ತ ಮತ್ತು ಫಲಾನುಭವಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಸರ್ಕಾರ ಅಧಿಕಾರಕ್ಕೆ ಬರಲು ಜನತೆಗೆ ನೀಡಿದ ಆಶ್ವಾಸನೆಗಳ ಬಗ್ಗೆ.

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೦ (೫೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ಅಧಿಕಾರಕ್ಕೆ ಬರಲು ಜನತೆಗೆ ಆಶ್ವಾಸನೆಗಳನ್ನು ನೀಡಿರುವುದು ನಿಜವೆ ; ಹಾಗಿದ್ದರೆ, ಅವುಗಳ ಒಟ್ಟು ಸಂಖ್ಯೆ ಎಷ್ಟು ; ಆ ಆಶ್ವಾಸನೆಗಳ ವಿವರಗಳೇನು ;

(ಆ) ಜನತೆಗೆ ನೀಡಿದ್ದ ಆಶ್ವಾಸನೆಗಳ ಪೈಕಿ ಒಟ್ಟು ಎಷ್ಟು ಆಶ್ವಾಸನೆಗಳನ್ನು ಸರ್ಕಾರ ಇದುವರೆವಿಗೆ ಈಡೇರಿಸಿದೆ ; ಇದಕ್ಕಾಗಿ ಖರ್ಚು ಮಾಡಿದ ಹಣ ಎಷ್ಟು ; ಮತ್ತು ಫಲಾನುಭವಿಗಳ ಸಂಖ್ಯೆ ಎಷ್ಟು ? (ಯೋಜನಾವಾರು ವಿವರ ನೀಡುವುದು)

## ಕರ್ನಾಟಕ ಸಹಕಾರಿ ಸಂಘಗಳ (ತಿದ್ದುಪಡಿ) ನಿಯಮಗಳು ೨೦೧೬ರ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೮೭೧ (೪೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸರ್ಕಾರವು ಕರ್ನಾಟಕ ಸಹಕಾರಿ ಸಂಘಗಳ (ತಿದ್ದುಪಡಿ) ನಿಯಮಗಳು ೨೦೧೬ಕ್ಕೆ ಸಾರ್ವಜನಿಕರಿಂದ ಆಕ್ಷೇಪಣೆ ಕೋರಿ ಗೆಜೆಟ್ ನೋಟಿಫಿಕೇಷನ್ ಮಾಡಿರುತ್ತಾರೆಯೇ ;

(ಆ) ಗೆಜೆಟ್ ನೋಟಿಫಿಕೇಷನ್ ಮಾಡಿದ್ದಲ್ಲಿ ಪ್ರತಿಗಳನ್ನು ಸಾರ್ವಜನಿಕವಾಗಿ ಎಂದು ವಿತರಿಸಲಾಗಿದೆ ;

(ಇ) ಸದರಿ ತಿದ್ದುಪಡಿಗೆ ಸಾರ್ವಜನಿಕರಿಂದ/ಸಂಘ ಸಂಸ್ಥೆಗಳಿಂದ ಬಂದಿರುವ ಆಕ್ಷೇಪಣೆಗಳ ಸಂಖ್ಯೆ ಎಷ್ಟು ; ಸದರಿ ಆಕ್ಷೇಪಣೆಗಳನ್ನು ಪರಿಗಣಿಸಲಾಗಿದೆಯೇ ;

(ಇ) ಉದ್ದೇಶಿತ ನಿಯಮಗಳ ತಿದ್ದುಪಡಿಯು ಸಹಕಾರ ಚಳುವಳಿಗೆ ಪೂರಕವಾಗಿದೆಯೇ ; ಮತ್ತು ಸಂವಿಧಾನದ ೯೭ನೇ ತಿದ್ದುಪಡಿಗೆ ಪೂರಕವಾಗಿದೆಯೇ ?

## ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ಮೊಕದ್ದಮೆ ಹೂಡಲು ಸರ್ಕಾರ ಅನುಮತಿ ನೀಡುವ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೮೭೨ (೪೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾಗಿದ್ದ ಸಮಯದಲ್ಲಿ ಭ್ರಷ್ಟಾಚಾರ ಎಸಗಿದ ಆರೋಪದ ಮೇಲೆ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ಮೊಕದ್ದಮೆ ಹೂಡಲು ರಾಜ್ಯ ಸರ್ಕಾರದ ಅನುಮತಿ ಕೋರಿ ಸಾರ್ವಜನಿಕರಿಂದ ಮನವಿ ಸಲ್ಲಿಸಲಾಗಿತ್ತೇ ;

(ಆ) ಅನುಮತಿ ಕೋರಿ ಮನವಿ ಸಲ್ಲಿಸಿದ್ದಲ್ಲಿ ಅನುಮತಿ ನೀಡಲಾಗಿದೆಯೇ ; ಅಥವಾ ಅನುಮತಿ ನಿರಾಕರಿಸಿದ್ದಲ್ಲಿ ಯಾವ ಕಾರಣಕ್ಕೆ ನಿರಾಕರಣೆ ಮಾಡಲಾಗಿರುತ್ತದೆ ; ಅನುಮತಿ ಕೋರಿರುವ ಅರ್ಜಿದಾರರಿಗೆ ಅನುಮತಿ ನೀಡಲು ರಾಜ್ಯ ಸರ್ಕಾರಕ್ಕೆ ಕಾನೂನಿನ ತೊಂದರೆ ಇದೆಯೇ ;

(ಇ) ಕರ್ನಾಟಕ ಲೋಕಸೇವಾ ಆಯೋಗದ ಈಗಿನ ಅಧ್ಯಕ್ಷರ ಮೇಲೆ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ಮೊಕದ್ದಮೆ ಹೂಡಲು ಅನುಮತಿ ಕೋರಿ ಎಷ್ಟು ಅರ್ಜಿಗಳು ಇಲ್ಲಿಯುವರೆಗೆ ಸಲ್ಲಿಕೆಯಾಗಿರುತ್ತದೆ ;

(ಈ) ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷರ ಮೇಲೆ ಗುರುತರವಾದ ಭ್ರಷ್ಟಾಚಾರ ಆರೋಪಗಳಿದ್ದು, ಇವರ ನಾಯಕತ್ವದಲ್ಲಿ/ನೇತೃತ್ವದಲ್ಲಿ ಕೆ.ಎ.ಎಸ್.ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ನಡೆಸುವುದು ಎಷ್ಟು ಸಮಂಜಸ ; ಸರ್ಕಾರ ಇದಕ್ಕೆ ಪರ್ಯಾಯ ಮಾರ್ಗ ಕೈಗೊಳ್ಳುವುದೇ ?

## ಏಳನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿಗೊಳಿಸುವ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :-**

೮೭೩ (೪೮೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ೭ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಯಥಾವತ್ತಾಗಿ ರಾಜ್ಯ ಸರ್ಕಾರದ ಸರ್ಕಾರಿ ನೌಕರರಿಗೆ ಅನ್ವಯವಾಗುವಂತೆ ಜಾರಿಗೊಳಿಸಲು ಕ್ರಮಗಳನ್ನು ಕೈಗೊಂಡಿದೆಯೇ ;

(ಆ) ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ೭ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿಗೊಳಿಸಲು ಯಾವುದಾದರೂ ಆಯೋಗ ಅಥವಾ ಅನುಷ್ಠಾನ ಮಂಡಳಿಯನ್ನು ಜಾರಿಗೊಳಿಸುವ ಉದ್ದೇಶವನ್ನು ಹೊಂದಿರುತ್ತದೆಯೇ ;

(ಇ) ರಾಜ್ಯ ಸರ್ಕಾರವು ೭ನೇ ವೇತನ ಆಯೋಗದ ಶಿಫಾರಸ್ಸುಗಳಿಗೆ ಅನುಗುಣವಾಗಿ ರಾಜ್ಯ ಸರ್ಕಾರಿ ನೌಕರರಿಗೆ ವೇತನಗಳನ್ನು ಹೆಚ್ಚಿಸುವುದಾದಲ್ಲಿ ಏಪ್ರಿಲ್ ೦೧, ೨೦೧೭ ರಿಂದ ಜಾರಿಗೊಳಿಸಬಹುದೇ ;

(ಈ) ರಾಜ್ಯ ಸರ್ಕಾರವು ಸರ್ಕಾರಿ ಮತ್ತು ಅರೆಸರ್ಕಾರಿ ನೌಕರರಿಗೆ ಕೇಂದ್ರ ಸರ್ಕಾರದ ವೇತನಗಳಿಗೆ ಅನುಗುಣವಾಗಿ ಸಮಾನಾಂತರ ವೇತನವನ್ನು ನೀಡುತ್ತದೆಯೇ ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ೧೫೦ನೇ ವಾರ್ಡಿನಲ್ಲಿ ಬಹುಮಹಡಿ ಕಟ್ಟಡ ಕುಸಿದು ಸತ್ತವರ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭೪ (೫೦೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ೧೫೦ನೇ ವಾರ್ಡಿನಲ್ಲಿ ಅಂಬಲಿಪುರ ಹಾಗೂ ಸುತ್ತಮುತ್ತ ಪ್ರದೇಶದಲ್ಲಿ ೨೦೧೫–೧೬ನೇ ಸಾಲಿನಲ್ಲಿ ಅಕ್ರಮ ಬಹುಮಹಡಿ ಕಟ್ಟಡಗಳು ಕುಸಿದು ದುರ್ಮರಣಕ್ಕೀಡಾದವರ ಸಂಖ್ಯೆ ಎಷ್ಟು ;

(ಆ) ಆ ಪೈಕಿ ಮೃತಪಟ್ಟವರ ಎಷ್ಟು ಕುಟುಂಬದವರಿಗೆ ಎಷ್ಟು ಮೊತ್ತದ ಪರಿಹಾರಧನವನ್ನು ನೀಡಲಾಗಿದೆ ; ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ; (ಮಾಹಿತಿ ಒದಗಿಸುವುದು)

(ಇ) ಇತ್ತೀಚೆಗೆ ಬೆಳ್ಳಂದೂರಿನಲ್ಲಿ ನಡೆದ ಅಕ್ರಮ ಬಹುಮಹಡಿ ಕಟ್ಟಡದ ಕುಸಿತದಿಂದ ದುರ್ಮರಣಕ್ಕೀಡಾದ ಪ್ರಕರಣದಲ್ಲಿ ಮಾಲೀಕರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮವೇನು ; (ಮಾಹಿತಿ ಒದಗಿಸುವುದು)

(ಈ) ಸದರಿ ವಾರ್ಡಿನಲ್ಲಿ ಇರುವ ಅಕ್ರಮ ಬಹುಮಹಡಿಗಳ ಸಂಖ್ಯೆ ಎಷ್ಟು ; ಇದರ ಮಾಲೀಕರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಬೆಂಗಳೂರು ಜಲ ಮಂಡಳಿ ನೀರಿನ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭೫ (೫೦೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ೧೫೦ನೇ ವಾರ್ಡಿನಲ್ಲಿ ಅಂಬಲಿಪುರ ಹಾಗೂ ಸುತ್ತಮುತ್ತ ಪ್ರದೇಶದಲ್ಲಿ ಕಾವೇರಿ ಕುಡಿಯುವ ನೀರನ್ನು ಒದಗಿಸಲು ಜಲಮಂಡಳಿ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಆ) ಸ್ಥಳೀಯ ನಿವಾಸಿಗಳಿಂದ ನೀರಿನ ಸಂಪರ್ಕ ನೀಡಲು ಜಲಮಂಡಳಿ ಸಂಗ್ರಹಿಸಿರುವ ಶುಲ್ಕ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ಶುಲ್ಕ ಸಂಗ್ರಹಿಸಿದರೂ ಸಹ ಇನ್ನೂ ಕುಡಿಯುವ ನೀರಿನ ಸಂಪರ್ಕ ನೀಡದಿರಲು ಕಾರಣವೇನು ; (ಮಾಹಿತಿ ಒದಗಿಸುವುದು)

(ಈ) ಕುಡಿಯುವ ನೀರಿನ ಸಂಪರ್ಕ ಒದಗಿಸಲಾಗುವುದು ಯಾವಾಗ ? (ಮಾಹಿತಿ ನೀಡುವುದು)

## ರೌಡಿ ಶೀಟರ್ ಪಟ್ಟಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೬ (೫೦೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಾಂತ ಕಳೆದ ಎರಡು ವರ್ಷದಲ್ಲಿ ಎಷ್ಟು ಜನರನ್ನು ರೌಡಿ ಶೀಟ್‌ಗೆ ಸೇರಿಸಲಾಗಿದೆ ; (ಪ್ರತಿ ಠಾಣೆಯ ಪ್ರತಿಯೊಬ್ಬರ ಹೆಸರು, ವಯಸ್ಸು, ವಿಳಾಸ ಸಹಿತ ಅವರ ಮೇಲಿನ ಆರೋಪ ವಿವರಗಳನ್ನು ಒಳಗೊಂಡಂತೆ ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ಎರಡು ವರ್ಷದಲ್ಲಿ ಎಷ್ಟು ರೌಡಿ ಶೀಟರ್‌ಗಳನ್ನು ಪಟ್ಟಿಯಿಂದ ಕೈಬಿಡಲಾಗಿದೆ (ಪ್ರತಿ ಠಾಣಾವಾರು ಪ್ರತಿಯೊಬ್ಬರ ಹೆಸರು, ವಯಸ್ಸು, ವಿಳಾಸ ಮತ್ತು ಕೈಬಿಡಲು ಕಾರಣಗಳು ಮುಂತಾದ ವಿವರಗಳನ್ನು ಒಳಗೊಂಡಂತೆ ಜಿಲ್ಲಾವಾರು ಮಾಹಿತಿ ನೀಡುವುದು)

## ಹಸಿರು ವಲಯದಿಂದ ಭೂಮಿ ಮುಕ್ತಗೊಳಿಸುವುದು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೭ (೫೦೮) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಹಸಿರು ವಲಯದಿಂದ ಎಷ್ಟು ಎಕರೆ ಭೂಮಿಯನ್ನು ಮುಕ್ತಗೊಳಿಸಿ, ಭೂ ಉಪಯೋಗಕ್ಕೆ ವರ್ಗಾಯಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಭೂ ಉಪಯೋಗ ಬದಲಾವಣೆಗಾಗಿ ಎಷ್ಟು ಕಡತಗಳು ಸರ್ಕಾರದ ಮುಂದಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಮಹಾನಗರ ಪಾಲಿಕೆಗಳಿಗೆ ಬಿಡುಗಡೆಯಾದ ಅನುದಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೮ (೫೦೫) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡಿದ ಅನುದಾನವೆಷ್ಟು ; ಆ ಪೈಕಿ ಖರ್ಚಾದ ಹಣವೆಷ್ಟು ; (ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನ ಸಮರ್ಪಕವಾಗಿ ಬಳಕೆಯಾಗದೆ ಕಾಮಗಾರಿಗಳು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಎಲ್ಲಾ ಮಹಾನಗರ ಪಾಲಿಕೆಗಳು ಘನ ತ್ಯಾಜ್ಯ ವಿಲೇವಾರಿಗಾಗಿ ಸಾಲಿಡ್ ಮ್ಯಾನೇಜ್‌ಮೆಂಟ್‌ಗೆ ಹಂಚಿಕೆ ಮಾಡಲಾದ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಈ) ಸಾಲಿಡ್ ವೇಸ್ಟ್ ಮ್ಯಾನೇಜ್‌ಮೆಂಟ್ ನಿಗದಿತ ಸಮಯದಲ್ಲಿ ಕಾರ್ಯನಿರ್ವಹಿಸುತ್ತಿದೆಯೇ ? (ವಿವರ ನೀಡುವುದು)

## ಅನ್ಯ ಸೇವೆ ಆಧಾರದ ಪದ್ಧತಿಯ ಪರಿಷ್ಕರಣೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೯ (೫೦೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಸಿಬ್ಬಂದಿ ಮತ್ತು ಅಧಿಕಾರಿಗಳು ಸುಮಾರು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಮತ್ತು ಅಧಿಕಾರಿಗಳ ಸಂಖ್ಯೆ ಎಷ್ಟು ; ಎಷ್ಟು ವರ್ಷಗಳಿಂದ ಓ.ಓ.ಡಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ ; (ವಾರ್ಡ್‌ವಾರು ವಿವರ ನೀಡುವುದು)

(ಇ) ಅನ್ಯ ಕರ್ತವ್ಯದ ಆಧಾರದ ಮೇಲೆ ನಿಯೋಜಿಸುವ ಪದ್ಧತಿಯ ನಿಯಮ ಪರಿಷ್ಕರಿಗೆ ಎಲ್ಲಾ ಸಿಬ್ಬಂದಿಗಳಿಗೂ ಅನುಕೂಲವಾಗುವಂತೆ ನಿಯಮಗಳನ್ನು ರೂಪಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತಿದೆ ? (ವಿವರ ನೀಡುವುದು)

(ಈ) ಅನ್ಯ ಕರ್ತವ್ಯದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಅವರ ಮಾತೃ ಇಲಾಖೆಗೆ ವಾಪಸ್ ಕಳುಹಿಸದೆ ಇರಲು ಕಾರಣಗಳೇನು ? (ಹೆಸರು ಮತ್ತು ಪದನಾಮದೊಂದಿಗೆ ಅವರು ಸೇವೆ ಸಲ್ಲಿಸಿರುವ ಕಾಲಾವಧಿಯ ಸಂಪೂರ್ಣ ವಿವರ ನೀಡುವುದು)

## ಹಳೆ ಬೈಯಪ್ಪನ ಹಳ್ಳಿಯ ಹರಿಜನ ಕಾಲೋನಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೮೮೦ (೫೪೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ನಂ.೫೦ ರಲ್ಲಿನ ಹಳೆ ಬೈಯಪ್ಪನ ಹಳ್ಳಿಯ ಒಳಚರಂಡಿ ವ್ಯವಸ್ಥೆಯು ಹದಗೆಟ್ಟಿದ್ದು, ಅದರಲ್ಲಿಯೂ ಹರಿಜನ ಕಾಲೋನಿ ಮತ್ತು ಕೆಲವು ಭಾಗಗಳಲ್ಲಿ ಒಳಚರಂಡಿ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂಬಂಧ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆವಿಗೆ ಹಳೆ ಬೈಯಪ್ಪನ ಹಳ್ಳಿಯ ಒಳಚರಂಡಿ ದುರಸ್ಥಿ ಹಾಗೂ ನಿರ್ಮಾಣ ಕಾಮಗಾರಿಗಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಇಲ್ಲಿನ ರಾಜ ಕಾಲುವೆಯು ಮುಚ್ಚಿಹೋಗಿದ್ದು, ಅದರ ದುರಸ್ಥಿ ಕಾರ್ಯವನ್ನು ಈವರೆವಿಗೂ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮಳೆಗಾಲ ಬರುವುದರೊಳಗೆ ಸೂಕ್ತ ಒಳಚರಂಡಿ ನಿರ್ಮಾಣ ವ್ಯವಸ್ಥೆ ಮಾಡದಿದ್ದಲ್ಲಿ, ಸಾರ್ವಜನಿಕರ ವಸತಿಗಳಿಗೆ ಅಪಾರ ನಷ್ಟವುಂಟಾಗುವ ಅರಿವು ಸರ್ಕಾರಕ್ಕೆ ಬಂದಿದೆಯೇ ;

(ಉ) ಈ ಸಮಸ್ಯೆಯನ್ನು ವಿಶೇಷವಾಗಿ ಪರಿಗಣಿಸಿ, ಜರೂರು ರಾಜ ಕಾಲುವೆ ದುರಸ್ಥಿಗೆ ಮತ್ತು ಒಳಚರಂಡಿ ಕಾಮಗಾರಿಗೆ ಸರ್ಕಾರ ಮುಂದಾಗುವುದೇ ; ಈ ಕಾಮಗಾರಿಯನ್ನು ಪ್ರಾರಂಭಿಸಲು ಬೇಕಾಗುವ ಕಾಲಾವಧಿ ಎಷ್ಟು ?

## ಹಳೆ ಬೈಯಪ್ಪನ ಹಳ್ಳಿಯ ರೈಲ್ವೆ ಗೇಟ್ ಮೇಲ್ಸೇತುವೆ ನಿರ್ಮಾಣ ಕಾಮಗಾರಿ ಸ್ಥಗಿತಗೊಂಡಿರುವ ಕುರಿತು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೮೮೧ (೫೪೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ನಂ.೫೦ ರಲ್ಲಿನ ಹಳೆ ಬೈಯಪ್ಪನ ಹಳ್ಳಿಯ ರೈಲ್ವೇ ಗೇಟ್ ಮೇಲ್ಸೇತುವೆ ನಿರ್ಮಾಣ ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ ; ಕಾಮಗಾರಿಯ ಒಟ್ಟು ವೆಚ್ಚವೆಷ್ಟು ; (ವಿವರ ನೀಡುವುದು)

(ಆ) ಸದರಿ ಕಾಮಗಾರಿಯ ಅರ್ಧಕ್ಕೆ ನಿಂತಿರುವುದು ನಿಜವೇ ; ಕಾಮಗಾರಿ ನಿಂತು ಎಷ್ಟು ವರ್ಷಗಳಾಯಿತು ; ಇದಕ್ಕೆ ಕಾರಣವೇನು ; (ವಿವರ ನೀಡುವುದು)

(ಇ) ಈ ನಿಟ್ಟಿನಲ್ಲಿ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಈ ಸಂಬಂಧ ರೈಲ್ವೇ ಇಲಾಖೆಯಿಂದ ಬಂದಿರುವ ಪ್ರತ್ಯುತ್ತರವೇನು ; ಇದಕ್ಕೆ ಸರ್ಕಾರದ ನಿಲುವೇನು ?

## ನೂತನ ಶಾಲಾ ಕಟ್ಟಡ ನಿರ್ಮಿಸುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೮೮೨ (೫೪೩) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ನಂ.೫೦ ರ ಹಳೆ ಬೈಯಪ್ಪನ ಹಳ್ಳಿಯ ಸರ್ಕಾರಿ ಪ್ರಾಥಮಿಕ ಪಾಠ ಶಾಲೆಯ ಹಳೇ ಕಟ್ಟಡವನ್ನು ಕೆಡವಿರುವುದು ನಿಜವೇ ; ನಿಜವಾಗಿದ್ದಲ್ಲಿ, ಯಾವಾಗ ಕೆಡವಲಾಯಿತು ; (ವಿವರ ನೀಡುವುದು)

(ಆ) ನಂತರ ಅದೇ ಸ್ಥಳದಲ್ಲಿ ನೂತನ ಶಾಲಾ ಕಟ್ಟಡ ಕಟ್ಟಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ; ಸದರಿ ಸ್ಥಳದಲ್ಲಿ ಶಾಲಾ ಕಟ್ಟಡ ಕಟ್ಟಲು ರಾಜೀವ್ ಗಾಂಧಿ ಆವಾಜ್ ಯೋಜನೆಯಡಿಯಲ್ಲಿ ಹಣ ಬಿಡುಗಡೆಯಾಗಿದೆಯೇ ; (ಹಣ ವಿನಿಯೋಗದ ಬಗ್ಗೆ ವಿವರ ನೀಡುವುದು)

(ಇ) ಸದರಿ ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿ ವಿಳಂಬವಾಗಲು ಕಾರಣವೇನು ;

(ಈ) ಸದರಿ ಶಾಲೆಗೆ ಜಾಗದ ಸಮಸ್ಯೆಯಿದ್ದಲ್ಲಿ ಬೈಯಪ್ಪನ ಹಳ್ಳಿಯಲ್ಲಿನ ಬೇರೆ ಸರ್ಕಾರಿ ಜಾಗದಲ್ಲಿ ಶಾಲಾ ಕಟ್ಟಡ ಕಟ್ಟಲು ಸರ್ಕಾರ ಮುಂದಾಗುವುದೇ ;

(ಉ) ಈ ನಿಟ್ಟಿನಲ್ಲಿ ತೆಗೆದುಕೊಂಡ ಕ್ರಮವೇನು ? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ನಂ.೫೦ರಲ್ಲಿ ಹೆಚ್ಚುವರಿ ಹಕ್ಕುಪತ್ರ ಹಂಚಿಕೆ ಮಾಡಿರುವ ಬಗ್ಗೆ.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೮೮೩ (೫೪೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ನಂ.೫೦ರ ಜಿ.ಬೈಯಪ್ಪನ ಹಳ್ಳಿಯ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಧೀನದಲ್ಲಿರುವ ಜಿ.ಬೈಯಪ್ಪನಹಳ್ಳಿ ಸ್ಲಂನಲ್ಲಿ ನಕಾಶೆಯ ಪ್ರಕಾರ ಎಷ್ಟು ನಿವೇಶನಗಳಿಗೆ ಅವಕಾಶವಿದೆ ; ಎಷ್ಟು ಕುಟುಂಬಗಳಿಗೆ ಹಕ್ಕು ಪತ್ರ ನೀಡಿ ನಿವೇಶನ ಹಂಚಿಕೆ ಮಾಡಲಾಗಿದೆ ; (ಲೇಔಟ್ ಪ್ಲಾನ್ ಒದಗಿಸುವುದು)

(ಆ) ಹಕ್ಕು ಪತ್ರ ನೀಡಿದ್ದಲ್ಲಿ, ಹಂಚಿಕೆಗಿಂತ ಹೆಚ್ಚುವರಿಯಾಗಿ ವಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಸದರಿ ಸ್ಥಳದಲ್ಲಿ ವಾಸ ಮಾಡುತ್ತಿರುವ ನಿವಾಸಿಗಳಿಗೆ ನೀಡಿರುವ ರಸ್ತೆ, ಒಳಚರಂಡಿ ಹಾಗೂ ಕುಡಿಯುವ ನೀರಿನ ಸೌಲಭ್ಯಗಳಾವುವು ; (ವಿವರ ನೀಡುವುದು)

(ಈ) ಇಲ್ಲಿ ಮೂಲಭೂತ ಸೌಲಭ್ಯದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸೌಲಭ್ಯ ಸೌಕರ್ಯಗಳನ್ನು ಒದಗಿಸಲು ವಿಶೇಷ ಹಣ ಬಿಡುಗಡೆಗೆ ಸರ್ಕಾರ ಮುಂದಾಗುವುದೇ ?

## ಗದಗ–ಬೆಟಗೇರಿ ಅವಳಿ ನಗರದ ಒಳಚರಂಡಿ ಕಾಮಗಾರಿ ಕುರಿತು

**ಶ್ರೀ ಎಸ್. ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) :–**

೮೮೪ (೫೫೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ–ಬೆಟಗೇರಿ ಅವಳಿ ನಗರದ ಒಂದನೇ ಹಂತದ ಒಳಚರಂಡಿ ಯೋಜನೆ ಕಾಮಗಾರಿ ಯಾವ ದಿನಾಂಕದಿಂದ ಪ್ರಾರಂಭಿಸಲಾಗಿದೆ ; ಮತ್ತು ಈ ಯೋಜನೆ ಪೂರ್ಣಗೊಂಡ ಕಾರ್ಯ ಪ್ರಾರಂಭವಾಗಿದೆಯೇ ;

(ಆ) ಗದಗ–ಬೆಟಗೇರಿ ಅವಳಿ ನಗರದ ಒಂದನೇ ಹಂತದ ಒಳಚರಂಡಿ ಯೋಜನೆಯ ಮಲೀನ ನೀರು ಶುದ್ಧೀಕರಣ ಘಟಕ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆಯೇ ; ಈ ಘಟಕದಿಂದ ಶುದ್ಧೀಕರಣವಾದ ನೀರನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗುತ್ತಿದೆ ;

(ಇ) ಗದಗ–ಬೆಟಗೇರಿ ಅವಳಿ ನಗರದ ವಿವಿಧ ಭಾಗಗಳಲ್ಲಿ ಬಹಳಷ್ಟು ಒಳಚರಂಡಿ ಬ್ಲಾಕ್ ಆಗಿದ್ದು ಇಲಾಖೆ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸಮರ್ಪಕ ಕಾರ್ಯ ನಿರ್ವಹಣೆಗಾಗಿ ಏನು ಕ್ರಮ ಕೈಗೊಳ್ಳಲಾಗಿದೆ ; ಸದರಿ ಕಾಮಗಾರಿ ಪೂರ್ಣಗೊಂಡಿದ್ದಲ್ಲಿ, ಅದರ ಪ್ರಾಥಮಿಕ ತಪಾಸಣೆ ಆಗಿ ನಗರ ಸಭೆಗೆ ಹಸ್ತಾಂತರಿಸಿದ್ದಾರೆಯೇ ;

(ಈ) ವಿವಿಧ ಭಾಗಗಳಲ್ಲಿ ಇರುವ ಚೇಂಬರ್ ಹಾಗೂ ಯು.ಜಿ.ಡಿ ಪೈಪುಗಳು ಬ್ಲಾಕ್ ಆಗಿದ್ದು, ಅವುಗಳನ್ನು ಸರಿಪಡಿಸಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ, ಗದಗ ಇವರಿಂದ ಹೆಚ್ಚಿನ ಅನುದಾನ ಕೋರಿ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಿದ್ದು,

ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯೋಜನೆ ಹೆಚ್ಚುವರಿ ಅನುದಾನಕ್ಕಾಗಿ ಯಾರನ್ನು ಜವಾಬ್ದಾರರನ್ನಾಗಿ ಮಾಡಲಾಗುತ್ತಿದೆ ; ಹಾಗೂ ಯು.ಜಿ.ಡಿ ಸುಧಾರಣೆಗಾಗಿ ಸರ್ಕಾರದಿಂದ ಜಲಮಂಡಳಿಗೆ ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಗದಗ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ವಿವಿಧ ದಾಖಲಾದ ಪ್ರಕರಣಗಳ ಕುರಿತು

**ಶ್ರೀ ಎಸ್. ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) :–**

೮೮೫ (೫೫೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಪೊಲೀಸ್ ಠಾಣೆಗಳಲ್ಲಿ ಕಳೆದ ಜನವರಿ ೨೦೧೫ರಿಂದ ೨೦೧೭ರ ಫೆಬ್ರವರಿಯವರೆಗೆ ಮನೆ, ಅಂಗಡಿಗಳ ಮೇಲೆ ಕಳ್ಳತನ ಮತ್ತು ದರೋಡೆ, ಸರಗಳ್ಳತನ, ಮಹಿಳೆ ಮತ್ತು ಮಕ್ಕಳ ಮೇಲೆ ಅತ್ಯಾಚಾರ ಮತ್ತು ಕೊಲೆ ಪ್ರಕರಣಗಳು ಎಷ್ಟು ದಾಖಲಾಗಿವೆ ;

(ಆ) ಸದರಿ ಪ್ರಕರಣಗಳ ಕುರಿತು ತನಿಖೆ ಯಾವ ಹಂತದಲ್ಲಿದೆ ; ಈ ಪ್ರಕರಣಗಳಲ್ಲಿ ಎಷ್ಟು ಆರೋಪಿಗಳು ಶಿಕ್ಷೆಗೆ ಒಳಪಟ್ಟಿದ್ದಾರೆ ; (ಪ್ರಕರಣವಾರು ವಿವರಣೆ ನೀಡುವುದು)

(ಇ) ಇತ್ತೀಚೆಗೆ ೨೦೧೭ರ ಜನವರಿ ತಿಂಗಳಲ್ಲಿ ಗದಗ ಜಿಲ್ಲೆಯಲ್ಲಿ ನಡೆದ ಎ.ಪಿ.ಎಂ.ಸಿ ಚುನಾವಣಾ ಸಂದರ್ಭದಲ್ಲಿ ಏನಾದರೂ ಅಹಿತಕರ ಘಟನೆಗಳು ಜರುಗಿ ಪ್ರಕರಣಗಳು ದಾಖಲಾಗಿವೆಯೇ ; ಹಾಗಿದ್ದಲ್ಲಿ, ಪ್ರಕರಣವಾರು ವಿವರ ನೀಡುವುದು ; ಮತ್ತು ಈ ಕುರಿತು ತನಿಖೆ ಯಾವ ಹಂತದಲ್ಲಿದೆ ; (ವಿವರಣೆ ನೀಡುವುದು)

(ಈ) ಕಳೆದ ೨೦೧೫ರಿಂದ ೨೦೧೮ರ ಫೆಬ್ರವರಿವರೆಗೆ ಅಕ್ರಮ ಮರಳು ಸಾಗಾಣಿಕೆಗೆ ಸಂಬಂಧಿಸಿದಂತೆ ಗದಗ ಜಿಲ್ಲೆಯ ವಿವಿಧ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿವೆಯೇ ; ಹಾಗಿದ್ದಲ್ಲಿ, ಪೊಲೀಸ್ ಠಾಣಾವಾರು ವಿವರ ನೀಡುವುದು ಮತ್ತು ಈ ಎಲ್ಲಾ ಪ್ರಕರಣಗಳ ತಪ್ಪಿತಸ್ಥರ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ರಾಜ್ಯದ ಕಾರಾಗೃಹಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೬ (೫೯೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಕೇಂದ್ರ ಕಾರಾಗೃಹಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಪ್ರತಿ ಕಾರಾಗೃಹದಲ್ಲಿನ ಸುರಕ್ಷತೆ, ರಕ್ಷಣಾ ವ್ಯವಸ್ಥೆ ಮತ್ತು ಭದ್ರತೆಗೆ ತೆಗೆದುಕೊಂಡ ಕ್ರಮಗಳೇನು ;

(ಇ) ಪ್ರತಿ ಕಾರಾಗೃಹದಲ್ಲಿನ ಒಟ್ಟು ಖೈದಿಗಳ ಸಂಖ್ಯೆ ಎಷ್ಟು ; ಸಿಬ್ಬಂದಿ ಸಂಖ್ಯೆ ಎಷ್ಟು ಯಾವ ಯಾವ ರೀತಿಯ ಖೈದಿಗಳು ಶಿಕ್ಷೆ ಅನುಭವಿಸುತ್ತಿದ್ದಾರೆ ; (ವಿವರ ನೀಡುವುದು)

(ಈ) ಸಾವಿರ ಖೈದಿಗಳಿಗೆ ೨೫೦ ಸಿಬ್ಬಂದಿಗಳಿರಬೇಕು ಎನ್ನುವುದು ಇಲಾಖೆಯ ನಿಮಯ, ಅದರಂತೆ ಪ್ರತಿ ಕಾರಾಗೃಹದಲ್ಲಿ ಅಷ್ಟು ಸಿಬ್ಬಂದಿ ಇದ್ದಾರೆಯೇ ; ಇಲ್ಲದಿದ್ದರೆ, ಕಾರಣವೇನು ; ಅದಕ್ಕೆ ತೆಗೆದುಕೊಂಡ ಕ್ರಮಗಳೇನು ;

(ಉ) ಸಿಬ್ಬಂದಿ ಕೊರತೆ, ಏರುತ್ತಿರುವ ಖೈದಿಗಳ ಸಂಖ್ಯೆ ಕಳಪೆ ನಿರ್ವಹಣೆ, ಭ್ರಷ್ಟಾಚಾರ, ಗುಂಪುಗಾರಿಕೆ ಮಾಫಿಯಾ ಹಿಡಿತ, ಬಡ್ಡಿದಂಧೆ ಕಾರಾಗೃಹದಿಂದಲೇ ಹೊರಗಿನ ಅಪರಾಧ ಜಗತ್ತಿನ ನಿರ್ವಹಣೆ, ಜೈಲಿನೊಳಗೆ ಡ್ರಗ್ಸ್ ಸರಬರಾಜಾಗುತ್ತಿರುವುದು ಈ ಸಂಘಟಿತ ಕೃತ್ಯಕ್ಕೆ ಜೈಲೊಳಗಿರುವ ಅನುಕೂಲಗಳು, ಕಾರಾಗೃಹಗಳ ಭದ್ರತೆ ಹಾಗೂ ವ್ಯವಸ್ಥೆ ಲೋಪವಿರುವುದು ಮತ್ತು ಜೈಲು ಅಧಿಕಾರಿಗಳೇ ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಸಹಕಾರ ಪತ್ತಿನ ಬ್ಯಾಂಕ್‌ಗಳಲ್ಲಿ ನಕಲಿ ಭೂ ದಾಖಲೆಯ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೭ (೫೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ಪತ್ತಿನ ಬ್ಯಾಂಕ್‌ಗಳಲ್ಲಿ ನಕಲಿ ಭೂ ದಾಖಲೆಗಳನ್ನು ಅಡಮಾನ ಇಟ್ಟುಕೊಂಡು ನೂರಾರು ಕೋಟಿ ರೂಪಾಯಿ ಸಾಲ ಪಡೆದು, ಮೋಸ ಮಾಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅಕ್ರಮದಲ್ಲಿ ಬ್ಯಾಂಕ್ ಅಧಿಕಾರಿಗಳೇ ಶಾಮೀಲಾಗಿರುವುದು ನಿಜವೇ ;

(ಇ) ಸಹಕಾರಿ ಬ್ಯಾಂಕ್‌ಗಳಲ್ಲಿ ನಕಲಿ ದಾಖಲೆ ಅಡವಿಟ್ಟು ಕೋಟ್ಯಂತರ ರೂಪಾಯಿ ಲಪಟಾಯಿಸಿರುವ ವಂಚಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ, ಎಲ್ಲೆಲ್ಲಿ ಈ ವಂಚನೆ ನಡೆದಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಈ ರೀತಿ ಜನರಿಗೆ ಸಹಕಾರ ಪತ್ತಿನ ಬ್ಯಾಂಕ್‌ಗಳಿಂದ ಮೋಸವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಮೊಬೈಲ್ ಟವರ್‌ಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೮ (೫೯೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮೊಬೈಲ್ ಟವರ್ ಅಳವಡಿಸಲು ಇರುವ ಮಾನದಂಡಗಳೇನು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಒಟ್ಟು ಮೊಬೈಲ್ ಟವರ್‌ಗಳ ಸಂಖ್ಯೆ ಎಷ್ಟು ;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮೊಬೈಲ್ ಟವರ್‌ಗಳಿಂದ ಇರುವ ಬಾಕಿ ಶುಲ್ಕವೆಷ್ಟು ;

(ಈ) ಕಳೆದ ೫ ವರ್ಷಗಳಿಂದ ಶುಲ್ಕ ಪಾವತಿಸದ ಕಂಪನಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಮೊಬೈಲ್ ಟವರ್‌ಗಳಿಂದ ಇರುವ ಬಾಕಿ ಶುಲ್ಕವನ್ನು ವಸೂಲಿ ಮಾಡಲು ಇರುವ ಅಡಚಣೆಗಳೇನು ?

## ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳ ಪಕ್ಕದಲ್ಲಿರುವ ಮದ್ಯದಂಗಡಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೯ (೫೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ, ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳ ಪಕ್ಕದಲ್ಲಿ ಮದ್ಯದಂಗಡಿ ಸ್ಥಾಪಿಸಲು ಇರುವ ಮಾನದಂಡವೇನು ;

(ಆ) ರಾಜ್ಯದಲ್ಲಿ, ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳ ಪಕ್ಕದಲ್ಲಿರುವ ಮದ್ಯದಂಗಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ದಿನಾಂಕ : ೧೬ರ ಡಿಸೆಂಬರ್ ೨೦೧೬ರಂದು ಸುಪ್ರೀಂ ಕೋರ್ಟ್ ಆದೇಶದಂತೆ ಎಲ್ಲಾ ರಾಜ್ಯದಲ್ಲಿ ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳ ಪಕ್ಕದಲ್ಲಿರುವ ಮದ್ಯದಂಗಡಿಗಳ ಮಾರಾಟ ಕೇಂದ್ರಗಳನ್ನು ಮುಚ್ಚಬೇಕೆಂಬ ಆದೇಶದಂತೆ ಇಲ್ಲಿಯವರೆಗೆ ಎಷ್ಟು ಮದ್ಯದಂಗಡಿಗಳನ್ನು ಮುಚ್ಚಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಉಳಿದ ಮದ್ಯ ಮಾರಾಟ ಕೇಂದ್ರಗಳನ್ನು ಮುಚ್ಚಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಡ್ರ್ಯಾಗ್ ರೇಸ್, ವೀಲಿಂಗ್ ಸ್ಟಂಟ್‌ಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೦ (೫೮೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಡ್ರ್ಯಾಗ್ ರೇಸ್, ವೀಲಿಂಗ್ ಸ್ಟಂಟ್ ನಡೆಸಿರುವವರ ವಿರುದ್ಧ ಒಟ್ಟು ಎಷ್ಟು ಪ್ರಕರಣಗಳು ದಾಖಲಾಗಿದೆ ; ಇಂತಹ ಪ್ರಕರಣಗಳಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು ;

(ಆ) ಡ್ರ್ಯಾಗ್ ರೇಸ್, ವೀಲಿಂಗ್ ಸ್ಟಂಟ್ ನಡೆಸುವವರ ವಿರುದ್ಧ ಇರುವ ಮಾನದಂಡಗಳೇನು ; ಇವರಿಂದಾದ ಅಪಘಾತಗಳ ಸಂಖ್ಯೆ ಎಷ್ಟು ;

(ಇ) ಬೆಂಗಳೂರು ನಗರದಲ್ಲಿ ಅತಿ ಹೆಚ್ಚು ಸ್ಟಂಟ್ ಪ್ರದರ್ಶನ ನಡೆಸುವ ಜಾಗಗಳು ಯಾವುವು ;

(ಈ) ಈ ರೀತಿ ಡ್ರ್ಯಾಗ್ ರೇಸ್, ವೀಲಿಂಗ್ ಸ್ಟಂಟ್ ನಡೆಸದಂತೆ ಮುನ್ನೆಚ್ಚರಿಕಾ ಕ್ರಮವನ್ನು ಸರ್ಕಾರ ತೆಗೆದುಕೊಂಡಿದೆಯೇ ?

## ನಗರದಲ್ಲಿ ಕುಡಿಯುವ ನೀರಿನ ಕೊರತೆ ನೀಗಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೮೯೧ (೫೯೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಈ ಬಾರಿಯ ಬೇಸಿಗೆಯಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ನೀರಿನ ಕೊರತೆಯನ್ನು ನೀಗಿಸಲು ಈ ಬಾರಿ ನಗರದಲ್ಲಿ ನೀರಿನ ಪಡಿತರ ಪದ್ಧತಿಯನ್ನು ನೀಗಿಸಲು ಜಾರಿಗೆ ತರಲು ಉದ್ದೇಶಿಸಲಾಗಿದೆಯೇ ;

(ಇ) ಕುಡಿಯುವ ನೀರಿನ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು ;

(ಈ) ನಗರಕ್ಕೆ ಕುಡಿಯುವ ನೀರು ಪೂರೈಕೆಯಲ್ಲಿನ ಪ್ರಸ್ತುತ ವಸ್ತುಸ್ಥಿತಿ ಏನು ? (ವಿವರ ನೀಡುವುದು)

## ನೌಕರರ ವರ್ಗಾವಣೆ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೮೯೨ (೫೯೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಸ್ಥಳ ನಿಯುಕ್ತಿಯಾಗದೆ 'ಕಡ್ಡಾಯ ನಿರೀಕ್ಷಣಾ ಅವಧಿ' ಮೇಲೆ ಕಳೆದ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು ; (ಗುಂಪುವಾರು ಮತ್ತು ಇಲಾಖಾವಾರು ವಿವರ ನೀಡುವುದು)

(ಆ) ಅಧಿಕಾರಿ/ನೌಕರರ ವರ್ಗಾವಣೆಯಾಗುತ್ತಿದ್ದಂತೆ ಸ್ಥಳ ನಿಯುಕ್ತಿ ಮಾಡದಿರಲು ಕಾರಣಗಳೇನು ; ಸ್ಥಳ ನಿಯುಕ್ತಿಗೊಳಿಸದ ಅಧಿಕಾರಿಗಳಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ನೀಡಿರುವ ವೇತನದ ಮೊತ್ತವೆಷ್ಟು ;

(ಇ) ಸ್ಥಳ ನಿಯುಕ್ತಿಗೊಳಿಸದಿರಲು ಕಾರಣಗಳೇನು ; (ಪ್ರತಿ ಪ್ರಕರಣದ ವಿವರ ನೀಡುವುದು)

(ಈ) ಸರ್ಕಾರಿ ನೌಕರರ ವರ್ಗಾವಣೆ, ಸ್ಥಳ ನಿಯುಕ್ತಿ ಹಾಗೂ ಕಡತ ವಿಲೇವಾರಿ ಸಂಬಂಧ ನಿಗಾ ವಹಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ತಪಾಸಣಾ ಘಟಕವಿರುವುದು ನಿಜವೇ; ಇದು ಕಾರ್ಯನಿರ್ವಹಿಸುತ್ತಿದೆಯೇ ?

## ಶಾಲಾ ಮಕ್ಕಳ ಮೇಲೆ ದೌರ್ಜನ್ಯ ಹಾಗೂ ಗ್ಯಾಂಗ್ ರೇಪ್ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೮೯೩ (೫೯೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಈ ವರ್ಷ ಸಂಭವಿಸಿರುವ ಅತ್ಯಾಚಾರ, ಶಾಲೆಯ ಮಕ್ಕಳ ಮೇಲಿನ ದೌರ್ಜನ್ಯ ಹಾಗೂ ಗ್ಯಾಂಗ್ ರೇಪ್‌ಗಳ ಸಂಖ್ಯೆ ಎಷ್ಟು ;

(ಆ) ಈ ಪ್ರಕರಣಗಳಲ್ಲಿ ಆರೋಪಿಗಳನ್ನು ಬಂಧಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸದರಿ ಪ್ರಕರಣಗಳಲ್ಲಿನ ತಪ್ಪಿತಸ್ಥರಿಗೆ ಯಾವ ರೀತಿಯ ಕಠಿಣ ಶಿಕ್ಷೆ ವಿಧಿಸಲು ಕ್ರಮ ಜರುಗಿಸಲಾಗಿದೆ;

(ಇ) ಬೆಂಗಳೂರು ಮಹಾನಗರದಲ್ಲಿ ಮಹಿಳೆಯರು ಮತ್ತು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ಪ್ರಕರಣಗಳು ಹೆಚ್ಚಾಗುತ್ತಿರುವುದು ನಿಜವೇ ; ನಿಜವಾಗಿದ್ದಲ್ಲಿ, ಇದಕ್ಕೆ ಕಾರಣವೇನು ;

(ಈ) ಇಂತಹ ಪ್ರಕರಣಗಳು ನಡೆಯದಂತೆ ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಹಾಗೂ ಕಾನೂನಾತ್ಮಕ ಕ್ರಮಗಳೇನು ?

## ಮಹಿಳಾ ಸುರಕ್ಷತೆಯ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೮೯೪ (೫೯೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಸುರಕ್ಷತೆಯನ್ನು ಇನ್ನಷ್ಟು ಖಾತರಿಪಡಿಸುವ ನಿಟ್ಟಿನಲ್ಲಿ ಕಳೆದ ವರ್ಷ ಕೇರಳ ಸರ್ಕಾರ ಜಾರಿಗೆ ತಂದ 'ಪಿಂಕ್ ಪೊಲೀಸ್ ಪೆಟ್ರೋಲಿಂಗ್' ವ್ಯವಸ್ಥೆಯನ್ನು ರಾಜ್ಯದಲ್ಲೂ ಜಾರಿಗೆ ತರಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಆ) ಬೆಂಗಳೂರು ನಗರದಲ್ಲಿ 'ಪಿಂಕ್ ಹೊಯ್ಸಳ' ಸೇವೆಯನ್ನು ಆರಂಭಿಸಲು ಯೋಜನೆ ರೂಪಿಸಲಾಗಿದೆಯೇ ; ಈ ಸೇವೆ ಎಂದಿನಿಂದ ಪ್ರಾರಂಭವಾಗುತ್ತದೆ ;

(ಇ) 'ಪಿಂಕ್ ಹೊಯ್ಸಳ' ವಾಹನದಲ್ಲಿ ಇರುವ ಪೊಲೀಸ್ ಸಿಬ್ಬಂದಿಗಳೆಷ್ಟು; ಇದು ಯಾವ ರೀತಿ ಕಾರ್ಯನಿರ್ವಹಿಸುತ್ತದೆ; ಈ ವಾಹನದಲ್ಲಿ ಮಹಿಳಾ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲು ಉದ್ದೇಶಿಸಲಾಗಿದೆಯೇ ;

## ಹೊಸ ಮಹಿಳಾ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸುವ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೮೯೫ (೫೩೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಮಹಿಳಾ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಜಿಲ್ಲೆಯಲ್ಲಿ ಎಷ್ಟು ಮಹಿಳಾ ಪೊಲೀಸರು ಕಾರ್ಯ ನಿರ್ವಹಿಸುತ್ತಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಹೊಸ ಮಹಿಳಾ ಪೊಲೀಸ್ ಠಾಣೆಯನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿ ವಾರ್ತಾ ಮತ್ತು ಪ್ರಚಾರ ಇಲಾಖೆಯ ಪತ್ರಿಕೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೯೬ (೫೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಾರ್ತಾ ಮತ್ತು ಪ್ರಚಾರ ಇಲಾಖೆ ಹಾಗೂ ಜನ ಸಂಪರ್ಕ ಇಲಾಖೆಯಲ್ಲಿ ತಯಾರಿಸಿದ ಮಾಧ್ಯಮ ಪಟ್ಟಿಯಲ್ಲಿ ಬರುವ ಪತ್ರಿಕೆಗಳು ಯಾವುವು ; (ಕ್ಷೇತ್ರ ಪತ್ರಿಕೆ, ಜಿಲ್ಲಾ ಪತ್ರಿಕೆಗಳ ಭಾಷಾವಾರು ವಿವರ ನೀಡುವುದು)

(ಆ) ಕರ್ನಾಟಕ ಸರ್ಕಾರ ಮಾಧ್ಯಮ ನೀತಿಯಲ್ಲಿ ಉರ್ದು ಹಾಗೂ ಅಲ್ಪಸಂಖ್ಯಾತರ ಭಾಷೆಯ ಅಭಿವೃದ್ಧಿಗೋಸ್ಕರ ಯಾವುದಾದರೂ ಕ್ರಮ ಕೈಗೊಳ್ಳಲಾಗಿದೆಯೇ ;

## ಬೆಳಗಾವಿ ಜಿಲ್ಲೆಯ ಪಟ್ಟಣಗಳಲ್ಲಿ ಶಿಥಿಲಗೊಂಡಿರುವ ಕುಡಿಯುವ ನೀರಿನ ಟ್ಯಾಂಕ್‌ಗಳ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೯೭ (೫೬೦) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ಪಟ್ಟಣ ಪ್ರದೇಶದ ಶಿಥಿಲಗೊಂಡಿರುವ ಕುಡಿಯುವ ನೀರಿನ ಸಂಗ್ರಹದ ಓವರ್ ಹೆಡ್ ಟ್ಯಾಂಕುಗಳೆಷ್ಟು; (ಪಟ್ಟಣವಾರು ವಿವರ ನೀಡುವುದು)

(ಆ) ಕುಡಿಯುವ ನೀರಿನ ಶಿಥಿಲಗೊಂಡಿರುವ ಓವರ್ ಹೆಡ್ ಟ್ಯಾಂಕುಗಳ ದುರಸ್ತಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ; ಅವುಗಳ ದುರಸ್ಥಿಗೆ ಪ್ರತ್ಯೇಕ ಅನುದಾನ ಕಾಯ್ದಿರಿಸಲಾಗಿದೆಯೇ ;

(ಇ) ಈಗ ಶಿಥಿಲಗೊಂಡಿರುವ ನೀರಿನ ಓವರ್ ಹೆಡ್ ಟ್ಯಾಂಕುಗಳನ್ನು ಎಷ್ಟು ದಿನಗಳಲ್ಲಿ ದುರಸ್ಥಿ ಮಾಡಲಾಗುವುದು ; ಇಲ್ಲವೆ ಹೊಸ ಟ್ಯಾಂಕ್ ನಿರ್ಮಾಣ ಮಾಡಲಾಗುವುದೇ; (ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯ ಶುದ್ಧ ಕುಡಿಯುವ ನೀರಿನ ಶುದ್ಧ ಘಟಕಗಳ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೯೮ (೫೯೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಪಟ್ಟಣ ಪ್ರದೇಶಗಳಲ್ಲಿ ಅಳವಡಿಸಿರುವ ಶುದ್ಧ ಕುಡಿಯುವ ನೀರಿನ ಜಲ ಶುದ್ಧೀಕರಣ ಘಟಕಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಶುದ್ದ ಕುಡಿಯುವ ನೀರಿನ ಘಟಕಗಳ ನಿರ್ವಹಣೆಯ ಜವಾಬ್ದಾರಿಯನ್ನು ಯಾರು ನಿರ್ವಹಿಸುತ್ತಿದ್ದಾರೆ ;

(ಇ) ಕಾರ್ಯನಿರ್ವಹಿಸುತ್ತಿಲ್ಲದಿರುವ ಘಟಕಗಳು ಯಾವುವು ; (ಅಂತಹ ಘಟಕಗಳ ನಗರವಾರು ವಿವರ ನೀಡುವುದು) ಸದರಿ ಘಟಕಗಳ ನಿರ್ವಹಣೆ ಮಾಡುವವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ? (ನಗರವಾರು ವಿವರ ನೀಡುವುದು)

## ರಾಜ್ಯದ ಚಿತ್ರಮಂದಿರಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೯೯ (೫೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರಮಂದಿರಗಳಲ್ಲಿ ಚಿತ್ರ ಪ್ರದರ್ಶನದ ಮೊದಲು ರಾಷ್ಟ್ರಗೀತೆಯ ಪ್ರಸಾರ ಮಾಡುವುದು ಕಡ್ಡಾಯಗೊಳಿಸಿದ್ದರೂ ಸಹ ಕೆಲವು ಚಿತ್ರಮಂದಿರಗಳಲ್ಲಿ ಇದನ್ನು ಪಾಲಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈವರೆಗೆ ಎಷ್ಟು ಚಿತ್ರಮಂದಿರಗಳ ವಿರುದ್ಧ ಕ್ರಮಕೈಗೊಳ್ಳಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಚಿತ್ರಮಂದಿರಗಳ ಟಿಕೇಟ್‌ಗಳ ಮೇಲೆ ಸರ್ಕಾರ ನಿಗದಿಪಡಿಸಿರುವ ದರದ ಬದಲಾಗಿ ಸೀಲು ಹಾಕಿ ಹೆಚ್ಚು ಶುಲ್ಕವನ್ನು ಪ್ರೇಕ್ಷಕರಿಂದ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಈವರೆಗೆ ಒಟ್ಟು ಎಷ್ಟು ಚಿತ್ರಮಂದಿರಗಳ ವಿರುದ್ಧ ಕ್ರಮಕೈಗೊಳ್ಳಲಾಗಿದೆ ; ಇದನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು ? (ಚಿತ್ರಮಂದಿರವಾರು ಸಂಪೂರ್ಣ ವಿವರ ನೀಡುವುದು)

## ಅಬಕಾರಿ ಇಲಾಖಾ ವತಿಯಿಂದ ಗ್ರಾಮ ಸಭೆಗಳನ್ನು ನಡೆಸುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೦೦ (೫೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಅಬಕಾರಿ ಇಲಾಖೆಯಿಂದ ಎಷ್ಟು ಗ್ರಾಮ ಸಭೆಗಳನ್ನು ನಡೆಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಮೂರು ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಅನಧಿಕೃತ ಮತ್ತು ಕಳ್ಳಬಟ್ಟಿ ಸಾರಾಯಿ ಹಾವಳಿಯನ್ನು ತಡೆಗಟ್ಟಲು ಅಬಕಾರಿ ಇಲಾಖೆಯವರಿಂದ ಯಾವ ಯಾವ ಗ್ರಾಮಗಳಲ್ಲಿ ಗ್ರಾಮ ಸಭೆಗಳನ್ನು ನಡೆಸಲಾಗಿದೆ ; (ಸಭೆ ನಡೆದ ಗ್ರಾಮದ ಹೆಸರು, ಗ್ರಾಮ ಸಭೆಯ ಫೋಟೋಗಳೊಂದಿಗೆ ಅಧೀನ ವಲಯ ಗಳೊಂದಿಗೆ, ಹಾಗೆ ಇಲಾಖೆ ಅಧಿಕಾರಿ/ಸಿಬ್ಬಂದಿಗಳವಾರು, ವರ್ಷವಾರು, ಗ್ರಾಮವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಮೂರು ಜಿಲ್ಲೆಗಳಲ್ಲಿ ಅಬಕಾರಿ ಇಲಾಖೆಯಿಂದ ಗ್ರಾಮ ಸಭೆಗಳನ್ನು ನಡೆಸದೆ ಇರುವುದಕ್ಕೆ ಕಾರಣಗಳೇನು ; ಈ ಸಭೆಗಳನ್ನು ನಡೆಸದೆ ಇರುವ ಅಧಿಕಾರಿ/ಅಧೀನ ಸಿಬ್ಬಂದಿಗಳ ಮೇಲೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ? (ವಲಯವಾರು ಸಂಪೂರ್ಣ ವಿವರ ನೀಡುವುದು)

## ಕುಡಿಯುವ ನೀರಿನ ಯೋಜನೆಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೦೧ (೫೧೪) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿರುವ ಕುಡಿಯುವ ನೀರಿನ ಮೂಲಗಳು ಯಾವುವು ;

(ಆ) ಬೇಸಿಗೆ ಕಾಲದಲ್ಲಿ ಈ ಮೂರು ಜಿಲ್ಲೆಗಳಿಗೆ ಸಮರ್ಪಕವಾಗಿ ಕುಡಿಯುವ ನೀರು ವಿತರಿಸಲು ಈಗಾಗಲೇ ನೀರು ಸಂಗ್ರಹಿಸಲಾಗಿದೆಯೇ ; ಈ ಮೂರು ಜಿಲ್ಲೆಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾದಲ್ಲಿ, ಕುಡಿಯುವ ನೀರಿನ ವ್ಯವಸ್ಥೆಗೆ ಸರ್ಕಾರ ಕೈಗೊಳ್ಳುವ ಮುನ್ನೆಚ್ಚರಿಕೆ ಕ್ರಮಗಳೇನು ;

(ಇ) ಈ ಯೋಜನೆಗೆ ೨೦೧೫–೧೬, ೨೦೧೬–೧೭ನೇ ಸಾಲಿನಲ್ಲಿ ನಿಗಧಿಪಡಿಸಲಾದ ಮತ್ತು ಬಿಡುಗಡೆಯಾದ ಅನುದಾನವೆಷ್ಟು ;

(ಈ) ಈ ಮೂರು ಜಿಲ್ಲೆಗಳಲ್ಲಿ ಪ್ರತಿನಿತ್ಯ ಕುಡಿಯುವ ನೀರನ್ನು ಸರಬರಾಜು ಮಾಡುವ ಯೋಜನೆ ಪ್ರಸ್ತುತ ಯಾವ ಹಂತದಲ್ಲಿದೆ? (ಕಾಮಗಾರಿವಾರು, ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ಕೇಂದ್ರ ಸರ್ಕಾರದ ಅನುದಾನ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೦೨ (೫೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ೨೦೧೬–೧೭ನೇ ಸಾಲಿಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ಈ ಬಿಡುಗಡೆಯಾದ ಹಣದಲ್ಲಿ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಿಗೆ ಇಲಾಖಾವಾರು ಎಷ್ಟು ಅನುದಾನವನ್ನು ಈವರೆಗೆ ರಾಜ್ಯ ಸರ್ಕಾರ ಬಿಡುಗಡೆ ಮಾಡಿದೆ ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಿಗೆ ರಾಜ್ಯ ಸರ್ಕಾರ ಬಿಡುಗಡೆ ಮಾಡಲು ಇಲಾಖಾವಾರು ಬಾಕಿ ಉಳಿದಿರುವ ಅನುದಾನ ಎಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಈ) ರಾಜ್ಯ ಸರ್ಕಾರ ಬಾಕಿ ಉಳಿದಿರುವ ಅನುದಾನವನ್ನು ಬಿಡುಗಡೆ ಮಾಡಲು ನಿಗಧಿಗೊಳಿಸಿರುವ ಕಾಲಮಿತಿ ಏನು? (ಇಲಾಖಾವಾರು ಹಾಗೂ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ವಿಜಯಪುರ ನಗರದ ರಾಜಕಾಲುವೆ ಒತ್ತುವರಿ ಬಗ್ಗೆ

**ಶ್ರೀ ಬಸವನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೩ (೫೮೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ನಗರದಲ್ಲಿ ಸರ್ಕಾರಿ ಜಾಗದ ರಾಜ ಕಾಲುವೆ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒತ್ತುವರಿಯಾದ ಈ ರಾಜ ಕಾಲುವೆಯ ಮೇಲಿನ ರಹವಾಸಿಗಳನ್ನು ತೆರವುಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು ? (ವಿವರವಾದ ಮಾಹಿತಿ ನೀಡುವುದು)

## ಪ್ರಾಧಿಕಾರ, ಮಂಡಳಿ ಹಾಗೂ ನಿಗಮಗಳ ಕಾರ್ಯವೈಖರಿ

**ಶ್ರೀ ಬಸವನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೪ (೫೭೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪ್ರಾಧಿಕಾರ, ಅಭಿವೃದ್ಧಿ ಮಂಡಳಿ ಹಾಗೂ ನಿಗಮ ಮಂಡಳಿಗಳು ಯಾವುವು; ಮತ್ತು ಅವುಗಳ ಉದ್ದೇಶಗಳೇನು ; (ಅಧ್ಯಕ್ಷರು ಹಾಗೂ ವ್ಯವಸ್ಥಾಪಕರ ಹೆಸರು ಮತ್ತು ವಿಳಾಸ ಸಹಿತ ವಿವರವಾದ ಮಾಹಿತಿ ನೀಡುವುದು)

(ಆ) ಇವುಗಳಿಗೆ ಕಳೆದ ೫ ವರ್ಷಗಳಲ್ಲಿ ಸರ್ಕಾರ ನಿಗಧಿಪಡಿಸಿದ ಅನುದಾನ ಎಷ್ಟು ; ಅನುದಾನ ನಿಗಧಿಗೆ ಸರ್ಕಾರವು ನಿಗಧಿಪಡಿಸಿರುವ ಮಾನದಂಡಗಳೇನು ; ಇದಕ್ಕೆ ಬೈಲಾಗಳೇನಾದರೂ ಇವೆಯೇ ; (ವಿವರ ನೀಡುವುದು)

(ಇ) ಸದರಿ ಪ್ರಾಧಿಕಾರ, ಮಂಡಳಿ ಹಾಗೂ ನಿಗಮಗಳ ಕಾರ್ಯವೈಖರಿ ಕುರಿತು ಸರ್ಕಾರ ತೃಪ್ತಿ ಹೊಂದಿದೆಯೇ ; ಇವುಗಳ ಅವಶ್ಯಕತೆ ಕುರಿತು ವಿವರಣೆ ನೀಡುವುದು, ಮತ್ತು ಇವುಗಳಿಂದ ಸರ್ಕಾರಕ್ಕೆ ಮತ್ತು ರಾಜ್ಯದ ಜನತೆಗೆ ಯಾವ ರೀತಿಯ ಲಾಭವಾಗಿದೆ ಅಥವಾ ಯಾರಿಗೆ ಲಾಭವಾಗಿದೆ ? (ಸಂಪೂರ್ಣ ವಿವರಣೆ ನೀಡುವುದು)

## ಹಜ್ ಯಾತ್ರೆ ಫಲಾನುಭವಿಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೫ (೫೬೫) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಜ್ ಯಾತ್ರೆಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ನಿಗಧಿಪಡಿಸಿರುವ ಮಾನದಂಡಗಳೇನು ; ಆಯ್ಕೆ ಪ್ರಕ್ರಿಯೆಯ ವಿಧಾನಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ೨೦೧೨ ರಿಂದ ಈವರೆವಿಗೂ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ಕೊಡಗು ಜಿಲ್ಲೆಯಿಂದ ಹಜ್ ಯಾತ್ರೆಗೆ ಸಹಾಯಧನ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; (ವರ್ಷಾವಾರು ವಿವರ ನೀಡುವುದು)

(ಇ) ಸದರಿ ಅರ್ಜಿಗಳಲ್ಲಿ ಹಜ್ ಯಾತ್ರೆಗೆ ಅವಕಾಶ ದೊರೆತ ಫಲಾನುಭವಿಗಳ ಸಂಖ್ಯೆ ಎಷ್ಟು ; ಹಾಗೂ ಈ ಯಾತ್ರೆಗೆ ವಿನಿಯೋಗಿಸಿದ ಮೊತ್ತವೆಷ್ಟು ? (ವರ್ಷಾವಾರು ವಿವರ ನೀಡುವುದು)

## ಪೊಲೀಸ್ ಇಲಾಖೆಯ ಆಧುನೀಕರಣ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೬ (೫೬೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪೊಲೀಸ್ ಇಲಾಖೆಯು ಆಧುನೀಕರಣಕ್ಕೆ ಸರ್ಕಾರ ರೂಪಿಸಿರುವ ಯೋಜನೆಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಆಧುನೀಕರಣಕ್ಕಾಗಿ ಮಾಡಿದ ವೆಚ್ಚವೆಷ್ಟು; (ವರ್ಷಾವಾರು ಮಾಹಿತಿ ನೀಡುವುದು)

(ಇ) ಸದರಿ ಆಧುನೀಕರಣಕ್ಕೆ ಸಿಬ್ಬಂದಿ ಸಜ್ಜುಗೊಳ್ಳಲು ಸೂಕ್ತ ತರಬೇತಿಯನ್ನು ನೀಡಲಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಕಾರ್ಯಕ್ರಮಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೭ (೫೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ನಿರುದ್ಯೋಗ ತೊಡೆದು ಹಾಕಲು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ರೂಪಿಸಿರುವ ಕಾರ್ಯಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಕೊಡಗು ಜಿಲ್ಲೆಗೆ ಸದರಿ ಕಾರ್ಯಕ್ರಮಗಳಿಗಾಗಿ ಬಿಡುಗಡೆಯಾದ ಅನುದಾನವೆಷ್ಟು ; ಅದರಲ್ಲಿ ಖರ್ಚಾದ ಅನುದಾನವೆಷ್ಟು ; (೨೦೧೩–೧೪ ರಿಂದ ಇಲ್ಲಿಯವರೆಗೆ ವರ್ಷಾವಾರು ಮಾಹಿತಿ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಕೌಶಲ್ಯಾಭಿವೃದ್ಧಿ ಹಾಗೂ ಉದ್ಯಮಶೀಲತೆಯನ್ನು ಪ್ರೋತ್ಸಾಹಿಸಲು ವಿಶೇಷ ಕೇಂದ್ರಗಳನ್ನು ತೆರೆಯಲಾಗಿದೆಯೇ ; ಎಷ್ಟು ಕೇಂದ್ರಗಳನ್ನು ಯಾವಾಗ ತೆರೆಯಲಾಗಿದೆ ? (ಪೂರ್ಣ ವಿವರ ನೀಡುವುದು)

## ಚಾಮರಾಜನಗರ ನಗರಾಭಿವೃದ್ಧಿ ಪ್ರಾಧಿಕಾರ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೦೮ (೫೪೯) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ನಗರಾಭಿವೃದ್ಧಿ ಪ್ರಾಧಿಕಾರವನ್ನು ರಚಿಸಲಾಗಿದ್ದು ಯಾವಾಗ ; ಹೊಸ ಬಡಾವಣೆಗಳ ರಚನೆ, ಉದ್ಯಾನವನಗಳ ಸಂರಕ್ಷಣೆ, ನಗರದ ವ್ಯವಸ್ಥಿತ ಬೆಳವಣಿಗೆಗೆ ಇದುವರೆಗೆ ಈ ಪ್ರಾಧಿಕಾರ ಮಾಡಿರುವ ಕೆಲಸ ಕಾರ್ಯಗಳು, ಸಾಧನೆಗಳು ಯಾವುವು ; (ವಿವರ ಒದಗಿಸುವುದು)

(ಆ) ಈ ಪ್ರಾಧಿಕಾರಕ್ಕೆ ಮಂಜೂರಾಗಿರುವ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು ; ಮಂಜೂರಾದ ಹುದ್ದೆಗಳ ಪೈಕಿ ಭರ್ತಿ ಮಾಡಲಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು)

(ಇ) ಚುಡಾ [CHUDA] ಕಟ್ಟಡದ ನಿರ್ಮಾಣ ಯಾವ ಹಂತದಲ್ಲಿದೆ ; ಈ ಯೋಜನೆ ಮುಕ್ತಾಯಗೊಳ್ಳಲಿರುವುದು ಯಾವಾಗ ; ಈ ಕಟ್ಟಡಕ್ಕೆ ಮಂಜೂರು ಮಾಡಿರುವ ಅಂದಾಜು ವೆಚ್ಚ ಎಷ್ಟು ;

(ಈ) ಬಡಾವಣೆಗಳ ರಚನೆಗೆ, ವಾಣಿಜ್ಯ ವ್ಯವಹಾರ ಸಮುಚ್ಚಯ ರಚನೆಗೆ (ಬಿಸಿನೆಸ್ ಪಾರ್ಕ್) ಲಾರಿಗಳ ನಿಲ್ದಾಣಕ್ಕೆ ಭೂಮಿಯನ್ನು ಗುರುತಿಸಲಾಗಿದೆಯೇ ; ಇವುಗಳ ರಚನೆಗೆ ಕೈಗೊಂಡಿರುವ ಕ್ರಮಗಳೇನು ?

## ಚಾಮರಾಜನಗರ ಒಳಚರಂಡಿ ಕಾಮಗಾರಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೦೯ (೫೭೧) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರದ ಒಳಚರಂಡಿ ಕಾಮಗಾರಿಯನ್ನು ಕಳೆದ ಐದು ವರ್ಷಗಳಿಂದ ಪೂರ್ಣಗೊಳ್ಳದೆ ಇರುವುದರಿಂದ ಜನ

ಸಾಮಾನ್ಯರಿಗೆ ವಿದ್ಯಾರ್ಥಿಗಳಿಗೆ, ಆಸ್ಪತ್ರೆಯ ರೋಗಿಗಳಿಗೆ ವಾಹನ ಸವಾರರಿಗೆ ದೂಳಿನಿಂದ ತೊಂದರೆ ಆಗಿರುವುದು ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ನಾಗರಿಕರು ಅನೇಕ ಬಾರಿ ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮುಕ್ತಾಯವಾಗಿರುವ ಕಾಮಗಾರಿಗಳು ಯಾವುವು ; ನಿರ್ಮಾಣ ಹಂತದಲ್ಲಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳು ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳ್ಳಲಿದೆ ;

(ಇ) ಈ ಕಾಮಗಾರಿಯ ಆರಂಭದ ಅಂದಾಜು ಮೊತ್ತ ಎಷ್ಟು ; ಇದುವರೆಗೆ ಖರ್ಚಾಗಿರುವ ವೆಚ್ಚ ಎಷ್ಟು ; ಇನ್ನೂ ಎಷ್ಟು ಹಣಕಾಸಿನ ಅಗತ್ಯತೆ ಇದೆ ? (ವಿವರ ಒದಗಿಸುವುದು)

## ಮೈಸೂರಿನ ಬನ್ನಿ ಮಂಟಪ ಕವಾಯಿತು ಮೈದಾನದ ಆಧುನೀಕರಣ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೧೦ (೫೭೦) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಬನ್ನಿಮಂಟಪ ಕವಾಯಿತು ಮೈದಾನದ ಆಧುನೀಕರಣ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ ; ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ; ಕೈಗೊಂಡಿರುವ ಕಾಮಗಾರಿಗಳು ಯಾವುವು ; (ವಿವರ ಒದಗಿಸುವುದು)

(ಆ) ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ; ಈವರೆವಿಗೆ ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ; ಇದಕ್ಕೆ ವಿನಿಯೋಗಿಸಿರುವ ವೆಚ್ಚ ಎಷ್ಟು ; (ಕಾಮಗಾರಿವಾರು ವಿವರ ಒದಗಿಸುವುದು) ಬಾಕಿ ಇರುವ ಕಾಮಗಾರಿಗಳು ಯಾವುವು ;

(ಇ) ಈ ಸ್ಥಳದಲ್ಲಿರುವ ಪಾರಂಪರಿಕ ರಚನೆಗಳನ್ನು, ಬನ್ನಿ (ಶಮೀ) ವೃಕ್ಷಗಳನ್ನು, ಹಳೆಯ ಕಾಲದ ಅಮೃತಶಿಲೆಯ ನೆಲಹಾಸುಗಳನ್ನು ರಕ್ಷಿಸಲು ಕ್ರಮ ಜರುಗಿಸಲಾಗಿದೆಯೇ ;

(ಈ) ಈ ಮೈದಾನವನ್ನು ಸಾರ್ವಜನಿಕ ಸಮಾರಂಭಗಳಿಗೆ ಬಾಡಿಗೆಗೆ ನೀಡಲು ತೀರ್ಮಾನಿಸಲಾಗಿದೆಯೇ ; ಮೈದಾನದ ಪಾವಿತ್ರ್ಯತೆಗೆ ಧಕ್ಕೆ ಬಾರದೆ ಇರುವ ರೀತಿಯ ಸಮಾರಂಭಗಳಿಗೆ ಮಾತ್ರ ಬಾಡಿಗೆಗೆ ನೀಡಲು ಕ್ರಮ ಜರುಗಿಸಲಾಗುವುದೇ ?

## ಮುಧೋಳ ನಗರದಲ್ಲಿ ನೀರು ಸರಬರಾಜು ಯೋಜನೆ

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧೧ (೫೭೨) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ಜಿಲ್ಲೆಯ ಮುಧೋಳ ನಗರದಲ್ಲಿ ನಗರ ನೀರು ಸರಬರಾಜು ಯೋಜನೆಗೆ ಮಂಜೂರಾತಿ ನೀಡಲಾಗಿದ್ದು ಯಾವಾಗ;

(ಆ) ಮುಧೋಳ ನಗರ ನೀರು ಸರಬರಾಜು ಯೋಜನೆಗೆ ಬಿಡುಗಡೆಯಾಗಿರುವ ಹಣ ಎಷ್ಟು ; ಸದರಿ ಕಾಮಗಾರಿಯು ಪೂರ್ಣಗೊಂಡಿದೆಯೇ ? (ವಿವರ ಒದಗಿಸುವುದು)

## ರಾಜ್ಯದಲ್ಲಿ ಅಧಿಕಾರಿ/ಸರ್ಕಾರಿ ನೌಕರರುಗಳಲ್ಲಿ ಹೆಚ್ಚಾದ ಅದಕ್ಷತೆ, ಭ್ರಷ್ಟಾಚಾರದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೨ (೫೮೪) ಮಾನ್ಯ ಗೃಹ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಐದು ವರ್ಷಗಳ ಅವಧಿಯಲ್ಲಿ ಕೊಡಗು ಜಿಲ್ಲೆಯಲ್ಲಿ ಲೋಕಾಯುಕ್ತ ದಾಳಿ, ಹಣ ದುರುಪಯೋಗ, ಇಲಾಖೆ ವಿಚಾರಣೆಗೆ ಒಳಾಗಾಗಿರುವ ಮತ್ತು ಎ.ಸಿ.ಬಿ ದಾಳಿಗೆ ಒಳಗಾಗಿ ವಿಚಾರಣೆ ಎದುರಿಸುತ್ತಿರುವ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು; ಇವರಿಗೆ ವಿಧಿಸಿರುವ ಶಿಕ್ಷೆ/ದಂಡದ ವಿವರಗಳೇನು ? (ಮಾಹಿತಿ ನೀಡುವುದು)

## ಗುತ್ತಿಗೆ ನೌಕರರಿಗೂ ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ), ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೩ (೫೮೫+೫೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಇಲಾಖೆ, ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು/ಸಿಬ್ಬಂದಿಗಳಿಗೆ ಖಾಯಂ ನೌಕರರ ಮಾದರಿಯಲ್ಲೇ "ಸಮಾನ ಕೆಲಸಕ್ಕೆ ಸಮಾನ ವೇತನ"ದ ಅಡಿಯಲ್ಲಿ ವೇತನ ನೀಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; ಈ ಬಗ್ಗೆ ನ್ಯಾಯಾಲಯದ ಆದೇಶವೇನಾದರೂ ಇದೆಯೇ ; (ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು)

(ಆ) ಈ ಪದ್ಧತಿಯನ್ನು ರಾಜ್ಯ ಸರ್ಕಾರವು ಜಾರಿಗೆ ತಂದಿರುತ್ತದೆಯೇ; ಇಲ್ಲದಿದ್ದಲ್ಲಿ, ಜಾರಿಗೊಳಿಸಲು ಯಾವ ಕಾಲಮಿತಿಯನ್ನು ನಿಗಧಿಗೊಳಿಸಿಕೊಂಡಿದೆ ; (ವಿವರ ನೀಡುವುದು)

(ಇ) ಈ ಆದೇಶವು ರಾಜ್ಯ ಸರ್ಕಾರದ ಯಾವ ಯಾವ ಇಲಾಖೆಗಳಿಗೆ ಅನ್ವಯಿಸುತ್ತದೆ ; ಗುತ್ತಿಗೆ ಆಧಾರದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ? (ವಿವರ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0282/800 ಪ್ರತಿಗಳು/08–03–2017